ವಿಜಯಪುರ | ಸಂಪುಟ 01 | ಸಂಚಿಕೆ 310 | ಪುಟ 4 | ₹ 3.00

https://udayarashminews.com

udayarashmi 7026028778

# ಉದಯ ರಶ್ಮಿ

ಜನಪರ-ಜೀವಪರ

ಸಂಪಾದಕ : ಇಂದುಶೇಖರ ಮಣೂರ

ಕನ್ನಡ ದಿನಪತ್ರಿಕೆ

editor.udayarashmi@gmail.com RNI NO: KARKAN/2023/86203 ಮಂಗಳವಾರ, ಫೆಬ್ರವರಿ 06, 2024

“ಎಲ್. ಕೆ.ಅಡ್ವಾಣಿ ಅವರಿಗೆ ಭಾರತ ರತ್ನ ನೀಡುತ್ತಿರುವುದು ತುಂಬಾ ಸಂತೋಷ. ಅವರೊಬ್ಬ ಅಪ್ಪಟ ದೇಶಭಕ್ತ, ನಿಷ್ಠಾವಂತ ಹಿಂದು ಕಾರ್ಯಕರ್ತರಾಗಿದ್ದರು. ಯೋಗ್ಯ ವ್ಯಕ್ತಿಗೆ ಯೋಗ್ಯ ಗೌರವ ಸಂದಿದ್ದು ಹೆಮ್ಮೆಯ ಸಂಗತಿ.”



– ಡಾ.ಪ್ರಭುಸಾರಂಗದೇವ ಶಿವಾಚಾರ್ಯರು
ಸಾರಂಗಮಠ, ಸಿಂದಗಿ

### ಮಲತಾಯಿ ಧೋರಣೆ ವಿರೋಧಿಸಿ ಕೇಂದ್ರದ ವಿರುದ್ಧದ ಪ್ರತಿಭಟನೆಗೆ ಬಿಜೆಪಿಯನ್ನು ಆಹ್ವಾನಿಸಿದ ಸಿಎಂ

# ಫೆ.7ರ ಪ್ರತಿಭಟನೆಗೆ ಬಿಜೆಪಿ ಧ್ವನಿಯಾಗಲಿ :ಸಿಎಂ

ಬೆಂಗಳೂರು: ನಮ್ಮ ರಾಜ್ಯಕ್ಕೆ ನಿರಂತರವಾಗಿ ಆಗುತ್ತಿರುವ ಅನ್ಯಾಯ, ತಾರತಮ್ಯ, ಮಲತಾಯಿ ಧೋರಣೆ ವಿರೋಧಿಸಿ ರಾಜ್ಯದ ಹಿತವನ್ನು ಕಾಪಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಫೆಬ್ರವರಿ 07ರಂದು ನವದೆಹಲಿಯ ಜಂತರ್ ಮಂತರ್ ನಲ್ಲಿ ಬೆಳಿಗ್ಗೆ 11.00 ಗಂಟೆಗೆ ಪ್ರತಿಭಟನೆ ಹಮ್ಮಿಕೊಳ್ಳಾಗಿದೆ' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಬಿಜೆಪಿ ಶಾಸಕರು, ಸಂಸದರು, ನಾಯಕರಿಗೂ ಈ ಮೂಲಕ ನಾವು ಪ್ರತಿಭಟನೆಗೆ ಕರೆ ಕೊಡುತ್ತಿದ್ದೇವೆ. ನಾವು ಬಿಜೆಪಿ ವಿರುದ್ಧ ಪ್ರತಿಭಟನೆ ಮಾಡುತ್ತಿಲ್ಲ. ರಾಜ್ಯದ ಪರವಾಗಿ ಪ್ರತಿಭಟಿಸುತ್ತಿದ್ದೇವೆ. ನೀವೂ ರಾಜ್ಯದ ಜನರ ಧ್ವನಿಯಾಗಿ, ರಾಜ್ಯದ ಜನರ ಪರವಾಗಿ ನಿಲ್ಲಿ ಎಂದು ಬಿಜೆಪಿಯವರಿಗೆ ಕರೆ ಕೊಡುತ್ತೇವೆ. ಕನ್ನಡಿಗರಿಗೆ ದ್ರೋಹ ಮಾಡಬೇಡಿ, ಬನ್ನಿ ರಾಜ್ಯದ ಪರವಾಗಿ ಧ್ವನಿ ಎತ್ತೋಣ ಎಂದು ಕರೆಯುತ್ತಿದ್ದೇವೆ. ಪ್ರತಿಭಟಿಸದೆ ಸುಮ್ಮನಿದ್ದರೆ ಕನ್ನಡಿಗರಿಗೆ ದ್ರೋಹ ಮಾಡಿದಂತಾಗುತ್ತದೆ' ಎಂದು ಹೇಳಿದ್ದಾರೆ.

'ರಾಜ್ಯದ ಜನತೆ ನಮಗೆ ಕೊಟ್ಟ ಅವಕಾಶಕ್ಕೆ ನ್ಯಾಯ ಒದಗಿಸಬೇಕಾದುದ್ದು ನಮ್ಮ ಕರ್ತವ್ಯ. ಒಕ್ಕೂಟ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ ನ್ಯಾಯ ಒದಗಿಸಿಕೊಡಲಿದೆ ಎಂದು ಇಲ್ಲಿಯವರೆಗೂ ತಾಳ್ಮೆಯಿಂದ ಕಾಯುತ್ತಿದ್ದೆವು. ಕಳೆದ ಸಾಲಿನ ಬಜೆಟ್ ನಲ್ಲಿ ಹೇಳಿದಂತೆ ನಡೆದುಕೊಳ್ಳುತ್ತಾರೆ ಎಂದು ಕಾದಿದ್ದೆವು. ಆದರೆ ಇದುವರೆಗೂ ಅನ್ಯಾಯ ಸರಿಪಡಿಸಿಲ್ಲ. ಇದರ ವಿರುದ್ಧ ಧ್ವನಿ ಎತ್ತಲೇಬೇಕಾಗಿದೆ. ಹೋರಾಟಕ್ಕೆ ಜೊತೆ ನೀಡಲು ಇಡೀ ಸರ್ಕಾರ ಪಕ್ಷ ಭೇದ ಮರೆತು ಆಹ್ವಾನ ನೀಡಿದ್ದೇವೆ. ಕನ್ನಡಿಗರಿಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕಿದೆ. ಕೇಂದ್ರದ ಕಿವಿಯನ್ನು ತೆರೆಸಲು ಹೋರಾಡುತ್ತಿದ್ದೇವೆ' ಎಂದು ಹೇಳಿದರು.

'ಭದ್ರಾ ಯೋಜನೆಗೆ ₹5,300 ಕೋಟಿ ಕೊಡುತ್ತೇವೆ ಎಂದು ಕಳೆದ ಸಾಲಿನ ಬಜೆಟ್ ನಲ್ಲಿ ಘೋಷಣೆ ಮಾಡಿ ಈವರಗೆ ಒಂದು ರೂಪಾಯಿ ಕೂಡ ಬಿಡುಗಡೆ ಮಾಡಿಲ್ಲ. ಬರ ಪರಿಹಾರದ ಹಣವೂ ಇಲ್ಲ. ನರೇಗಾ ಅಡಿ 150 ಮಾನವ ದಿನಗಳಿಗೆ ಕೂಲಿ ಕೊಡಲು ಕೂಡ ಅನುಮತಿ ನೀಡಿಲ್ಲ. ಇಂಥ ಹಲವು ಕಾರಣಗಳಿಗಾಗಿ ಅನಿವಾರ್ಯವಾಗಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ' ಎಂದರು.

'ದೇಶದ ಜನರ ಗಮನ ಸೆಳೆಯಬೇಕು, ಕೇಂದ್ರ ಸರ್ಕಾರದ ಮಲತಾಯಿ ಧೋರಣೆ ಬಗ್ಗೆ, ಹಣಕಾಸು ಹಂಚಿಕೆಯಲ್ಲಾಗಿರುವ ತಾರತಮ್ಯ, ಬರ ಪರಿಹಾರದಲ್ಲಿ ತೋರಿರುವ ಮಲತಾಯಿ ಧೋರಣೆ ಬಗ್ಗೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಎಲ್ಲ ಶಾಸಕರು, ಮೇಲ್ಮನೆ ಶಾಸಕರು ಭಾಗವಹಿಸುತ್ತಿದ್ದಾರೆ. ಒಕ್ಕೂಟ ವ್ಯವಸ್ಥೆಯಲ್ಲಿ ಸಂವಿಧಾನದ ಮೂಲಕ ಕೇಂದ್ರ ಮತ್ತು ರಾಜ್ಯ ಹಾಗೂ ಕೇಂದ್ರಾಡಳಿತ ಪ್ರದೇಶಗಳು ಸೇರಿ ಜನರ ಸೇವೆಯನ್ನು ಮಾಡಲು ಒಪ್ಪಿಕೊಂಡಿದ್ದೇವೆ. ಕೇಂದ್ರ ಸರ್ಕಾರದ ತೆರಿಗೆ ಹಣವೆಂದರೆ ರಾಜ್ಯಗಳಿಂದ ಬರುವ ತೆರಿಗೆ ಹಣ, ಸೆಸ್, ಪೆಟ್ರೋಲ್ ಡೀಸೆಲ್, ಸರ್ಚಾರ್ಜ್. ಇವುಗಳಿಂದ ಸಂಗ್ರಹವಾಗುವ ಹಣವನ್ನು ಕೇಂದ್ರ ಮತ್ತು ರಾಜ್ಯಗಳಿಗೆ ಹಂಚಿಕೆಯಾಗಬೇಕೆಂದು ಹಣಕಾಸು ಆಯೋಗ ರಚನೆಯಾಗಿದೆ. ಸಂವಿಧಾನದ 7ನೇ ಪರಿಚ್ಛೇಧ ಅದನ್ನು ಸ್ವತಂತ್ರ ಸಂಸ್ಥೆಯಾಗಿಸಿದೆ. ಇಲ್ಲಿಯವರೆಗೆ 15 ಹಣಕಾಸು ಆಯೋಗಗಳು ಆಗಿವೆ. ಪ್ರಸ್ತುತ 16ನೇ ಹಣಕಾಸು ಆಯೋಗ ರಚನೆಯಾಗಿದ್ದು, ಅಧ್ಯಕ್ಷರ ನೇಮಕವಾಗಿದೆ' ಎಂದು ವಿವರಿಸಿದರು.

'ನರೇಂದ್ರ ಮೋದಿಯವರು ಸೂಕ್ಷ್ಮ ಇದ್ದಾರೆ, ಪ್ರತಿಭಟನೆ ಬಳಿಕವಾದರೂ ರಾಜ್ಯಕ್ಕೆ ಆಗಿರುವ ಅನ್ಯಾಯ ಸರಿಪಡಿಸಿ ಕರ್ನಾಟಕದ ಪಾಲಿನ ಹಣವನ್ನು ವಾಪಾಸ್ ಕೊಡಬಹುದು ಎಂಬ ಆಶಾಭಾವನೆ ಇದೆ.

ಮುಂಬರುವ ಅಧಿವೇಶನದಲ್ಲಿ ಶ್ವೇತಪತ್ರ ಹೊರಡಿಸಲು ರಾಜ್ಯ ಸರ್ಕಾರವು ಚಿಂತನೆ ನಡೆಸಿದೆ' ಎಂದು ಹೇಳಿದರು.

## ಕೇಂದ್ರದಿಂದ ರಾಜ್ಯಕ್ಕೆ ಭೀಕರ ಅನ್ಯಾಯ

'ರಾಜ್ಯದಿಂದ ಪ್ರತಿ ವರ್ಷ ಕೇಂದ್ರಕ್ಕೆ ₹4,30,000 ಕೋಟಿ ತೆರಿಗೆ ವಸೂಲಿ ಆಗಿ ಹೋಗುತ್ತಿದೆ. ತೆರಿಗೆ ಸಂಗ್ರಹಣೆಯಲ್ಲಿ ಮಹಾರಾಷ್ಟ್ರ ಬಿಟ್ಟರೆ ನಮ್ಮ ರಾಜ್ಯ ಎರಡನೇ ಸ್ಥಾನದಲ್ಲಿದೆ. ನಮಗೆ ಈ ವರ್ಷ ತೆರಿಗೆ ಪಾಲಿನಲ್ಲಿ ರೂ.37,252 ಕೋಟಿ ಬರುವುದು. ಕೇಂದ್ರ ಪುರಸ್ಕೃತ ಯೋಜನೆಯಲ್ಲಿ 13,005 ಕೋಟಿ ರೂಪಾಯಿ, ಎರಡೂ ಸೇರಿ ಕೇವಲ 50,257 ಕೋಟಿ ರೂಪಾಯಿ ರಾಜ್ಯಕ್ಕೆ ಬಂದಿದೆ. ರಾಜ್ಯಕ್ಕೆ ಇದು ಭೀಕರ ಅನ್ಯಾಯ ಅಲ್ಲವೇ? ಎಂದು ಸಿಎಂ ಸಿದ್ದರಾಮಯ್ಯ ಆಕ್ರೋಶ ವ್ಯಕ್ತಪಡಿಸಿದರು.

ಒಟ್ಟು ಲೆಕ್ಕದಲ್ಲಿ ರಾಜ್ಯದಿಂದ ₹100 ಕೇಂದ್ರಕ್ಕೆ ಹೋದರೆ ಅದರಲ್ಲಿ ನಮಗೆ ₹12– 13 ಮಾತ್ರ ವಾಪಾಸ್ ಬರುತ್ತಿದೆ. ಉಳಿದದ್ದು ಕೇಂದ್ರ ಸರ್ಕಾರ ಇಟ್ಟುಕೊಳ್ಳುತ್ತಿದೆ ಎಂದು ಕೇಂದ್ರ ಸರ್ಕಾರವೇ ಅಂಕಿ ಅಂಶಗಳನ್ನು ನೀಡಿದೆ. 2017–18 ರಲ್ಲಿ ಕೇಂದ್ರದ ಬಜೆಟ್ ಗಾತ್ರ ₹21,46,735 ಕೋಟಿ ಇತ್ತು. ಆಗ ರಾಜ್ಯಕ್ಕೆ ತೆರಿಗೆ ಪಾಲು ₹31,908 ಕೋಟಿ, ಅನುದಾನ ಹಾಗೂ ನಗದು ಹಂಚಿಕೆ ₹16,072 ಕೋಟಿ, ಎರಡೂ ಸೇರಿಸಿ ₹47,990 ಕೋಟಿ ಸಿಕ್ಕಿತ್ತು' ಎಂದರು.


'2023–24 ಸಾಲಿನಲ್ಲಿ ₹45,03,097 ಕೋಟಿ ಕೇಂದ್ರ ಬಜೆಟ್ ಆಗಿದ್ದು, ರಾಜ್ಯಕ್ಕೆ ₹50,257 ಕೋಟಿ ಮಾತ್ರ ಸಿಗುವ ಅಂದಾಜಿದೆ. ತೆರಿಗೆ ಹಂಚಿಕೆ 2.2 ಇಂದ 2024–25 ಕ್ಕೆ 1.23 ಗೆ ಇಳಿದಿದೆ. ಇದರಿಂದಾಗಿ ರಾಜ್ಯಕ್ಕೆ ಆಗುವ ಅನ್ಯಾಯದ ಪ್ರಮಾಣ ಹೆಚ್ಚುತ್ತಲೇ ಇದೆ. ಬಜೆಟ್ ಗಾತ್ರ ಡಬಲ್ ಆದಾಗ, ರಾಜ್ಯದ ತೆರಿಗೆಯ ಪಾಲು ದುಪ್ಪಟ್ಟಾಗಬೇಕಿತ್ತು. ಆದರೆ, ಈಗ ಅರ್ಧಕ್ಕಿಂತ ಹೆಚ್ಚು ಕಡಿಮೆ ಆಗಿದೆ. ಸೆಸ್, ಸರ್ ಚಾರ್ಜ್ ಪ್ರತೀ ವರ್ಷ ಹೆಚ್ಚಿಸಿಕೊಂಡು ಹೋಗುತ್ತಿದ್ದಾರೆ. ಸೆಸ್, ಸರ್ ಚಾರ್ಜ್ ಮೂಲಕ ಕೇಂದ್ರ ವಸೂಲಿ ಮಾಡುವ ತೆರಿಗೆಯಲ್ಲಿ ರಾಜ್ಯಗಳಿಗೆ ನಯಾಪೈಸೆ ವಾಪಾಸ್ ಬರಲ್ಲ. ಆದರೆ ಸೆಸ್, ಸರ್ ಚಾರ್ಜ್ ಎರಡೂ ಕೊಡೋದು ರಾಜ್ಯಗಳೇ.

ಆದ್ದರಿಂದ 16ನೇ ಹಣಕಾಸು ಆಯೋಗದ ಮುಂದೆ ಸೆಸ್ ಹಾಗೂ ಸರ್ ಚಾರ್ಜ್ ನಲ್ಲೂ ಪಾಲು ಕೊಡಲೇಬೇಕು ಎಂದು ಒತ್ತಾಯಿಸುತ್ತೇವೆ. ಈ ಬಗ್ಗೆ ಗಟ್ಟಿಯಾಗಿ ಧ್ವನಿ ಎತ್ತಲಿದ್ದೇವೆ. ಇದರ ಜತೆಗೆ ಶೇ.1 ರಷ್ಟು ರಕ್ಷಣಾ ಇಲಾಖೆಗೆ ಇಟ್ಟುಕೊಳ್ಳುತ್ತಾರೆ. ಹೀಗೆ ಮೋದಿ ಅವರು ಬಂದ ನಂತರ ರಚನೆಯಾದ 15ನೇ ಹಣಕಾಸು ಆಯೋಗದ ಬಳಿಕ ರಾಜ್ಯಕ್ಕೆ 1,87,867 ಕೋಟಿ ರೂ. ಅನ್ಯಾಯವಾಗಿದೆ' ಎಂದು ಸಿದ್ದರಾಮಯ್ಯ ಅಂಕಿ ಅಂಶಗಳ ಸಹಿತ ವಿವರಿಸಿದರು.

## ರಾಜ ನುಡಿ

ಸಂಬಂಧದಲ್ಲಿ ಮನುಷ್ಯನನ್ನು ಬಿಟ್ಟು ಅವನ ಮಾತುಗಳನ್ನೇ ಹಿಡಿದುಕೊಳ್ಳುವ ವ್ಯಕ್ತಿ, ಮಕ್ಕಳನ್ನು ಬಿಟ್ಟು ಅವರು ಪಡೆಯುವ ಅಂಕಗಳನ್ನೇ ನಿರೀಕ್ಷಿಸುವ ಪೋಷಕ ಇಬ್ಬರೂ ಒಂದೇ ನಾಣ್ಯದ ಎರಡು ಮುಖಗಳು. ಈ ಇಬ್ಬರೂ ನಿರರ್ಥಕ. ವ್ಯಕ್ತಿಯನ್ನು ಅಪ್ಪಿ ಅವರ ತಪ್ಪುಗಳನ್ನಲ್ಲ. ಮಕ್ಕಳನ್ನು ಪ್ರೀತಿಸಿ ಅವರ ಅಂಕಗಳನ್ನಲ್ಲ..

–ಡಾ. ರಾಜಶೇಖರ ನಾಗೂರ



## ವಚನ ಚಿಂತನ 294

*ಲಿಂಗಜ್ಯೋತಿಯ ಬೆಳಗು*

*ಎಣ್ಣೆ ಬತ್ತಿ ಪ್ರಣತೆ ಕೂಡಿ ಜ್ಯೋತಿಯ ಬೆಳಗಯ್ಯಾ.*
*ಅಸ್ಥಿ ಮಾಂಸ ದೇಹ ಪ್ರಾಣ ನಿಃಪ್ರಾಣವಾಯಿತ್ತು.*
*ದೃಷ್ಟಿ ಪರಿದು ಮನಮುಟ್ಟಿದ ಪರಿಯೆಂತೊ ?*
*ಮುಟ್ಟಿ ಲಿಂಗವ ಕೊಂಡಡೆ,*
*ಕೆಟ್ಟಿತ್ತು ಜ್ಯೋತಿಯ ಬೆಳಗು !*
*ಇದು ಕಷ್ಟವೆಂದರಿದೆನು ಗುಹೇಶ್ವರಾ.*
*– ಅಲ್ಲಮಪ್ರಭುಗಳು.*

ಬಾಹ್ಯದ ಬೆಳಗು ಬೆಳಗಲು ಪ್ರಣತೆ, ಅದರೊಳಗೆ ಬತ್ತಿ ಹಾಗೂ ಎಣ್ಣೆ ಬೇಕು. ಇವೆಲ್ಲವುಗಳಿಗೆ ಒಂದು ಬಾಹ್ಯ ಜ್ಯೋತಿ ತಾಗಿದಾಗ ಮತ್ತೊಂದು ಬತ್ತಿಯು ಜ್ಯೋತಿಯಾಗಿ ಅದು ಪ್ರಜ್ವಲಿಸುತ್ತದೆ, ಹಾಗೇಯೇ ಅಂತರಂಗದಲ್ಲಿಯ ಜ್ಯೋತಿ ಬೆಳಗಲು ಕಾಯದ ಅಸ್ತಿ, ಮಾಂಸ, ಪ್ರಾಣಕ್ಕೆ ಸಾಧನೆಯ ಮೂಲಕ ಇಷ್ಟಲಿಂಗದ ಅರಿವಿನ ಜ್ಯೋತಿ ತಾಗಿದಾಗ(ಪ್ರಾಣ ನಿಃಪ್ರಾಣವಾಗಿ ಇಷ್ಟಲಿಂಗದ ನಿರೀಕ್ಷೆಯ ದೃಷ್ಟಿಹರಿದು ಮನ ಚಂಚಲರಹಿತ ಸ್ಥಿತಿ ತಲುಪಿದಾಗ) ಅಂತರಂಗದ ಜ್ಯೋತಿ ಬೆಳಗುತ್ತದೆ, ಈ ಬೆಳಗಿನೊಳಗೆ ವಿಹರಿಸುವ ಶರಣನು ಮರಳಿ ಬಾಹ್ಯದ ಬೆಳಗಿಗೆ ಆಸೆ ಪಟ್ಟರೆ(ಮನಚಂಚಲದ ವಿಷಯವಾಸನೆಗೆ) ಕೆಟ್ಟತ್ತು ಜ್ಯೋತಿಯ ಬೆಳಗು ! ಇದು ಕಷ್ಟವೆಂದರಿದೆನು ಗುಹೇಶ್ವರಾ. ಎಂದಿರುವರು ಅಲ್ಲಮಪ್ರಭುಗಳು.

-ರುದ್ರೇಶ ಕಿತ್ತೂರ, ಮುದ್ದೇಬಿಹಾಳ

### ಮರಗೂರ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಗೆ ಫೆ.11ರಂದು ಚುನಾವಣೆ

## ಮಾಜಿ ಶಾಸಕ ರವಿಕಾಂತ ಕಣದಿಂದ ಹಿಂದಕ್ಕೆ :ಅಭಿಮಾನಿಗಳಿಗೆ ನಿರಾಸೆ

ಉದಯರಶ್ಮಿ ನ್ಯೂಸ್

ಇಂಡಿ: ತಾಲೂಕಿನ ಮರಗೂರ ಭೀಮಾಶಂಕರ ಸಹಕಾರಿ ಸಕ್ಕರೆ ಕಾರ್ಖಾನೆಗೆ ಫೆಬ್ರವರಿ 11ರಂದು ಚುನಾವಣೆ ನಿಗದಿಯಾಗಿದ್ದು, ಫೆಬ್ರವರಿ 5 ಸೋಮವಾರ ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿತ್ತು.



ಸೋಮವಾರ 33 ಜನ ಅಭ್ಯರ್ಥಿಗಳು ತಮ್ಮ ನಾಮಪತ್ರವನ್ನು ಹಿಂಪಡೆದುಕೊಂಡರು, ಪ್ರಮುಖವಾಗಿ ಮಾಜಿ ಶಾಸಕ ರವಿಕಾಂತ ಪಾಟೀಲ್ ಅವರು ಸಹ ತಮ್ಮ ನಾಮಪತ್ರ ಹಿಂಪಡೆದಿದ್ದು ಅವರ ಅಭಿಮಾನಿಗಳಲ್ಲಿ ನಿರಾಶೆ ಮೂಡಿಸುವಂತಾಯಿತು.

ಸ್ಥಳೀಯ ಶಾಸಕ ಹಾಗೂ ಕಾರ್ಖಾನೆಯ ಅಧ್ಯಕ್ಷರಾಗಿರುವ ಯಶವಂತರಾಯಗೌಡ ಪಾಟೀಲ್ ಅವರು ಅವಿರೋಧ ಆಯ್ಕೆ ಮಾಡುವ ಪ್ರಯತ್ನದಲ್ಲಿ ಇದ್ದರೂ ಅವರ ಪ್ರಯತ್ನ ಕೈಗೂಡಲಿಲ್ಲ, ಸಾಮಾನ್ಯ ಸ್ಥಾನದಲ್ಲಿ ಐದು ಸ್ಥಾನಗಳಿಗೆ 8 ಜನ ಅಭ್ಯರ್ಥಿಗಳು ಉಳಿದುಕೊಂಡಿದ್ದು ನಾಳೆಯಿಂದಲೇ ಚುನಾವಣಾ ಪ್ರಚಾರ ಪ್ರಾರಂಭವಾಗಲಿದೆ.

ಕಣದಲ್ಲಿರುವವರಲ್ಲಿ ಮಾಜಿ ಶಾಸಕ ಡಾ. ಸಾರ್ವಭೌಮ ಬಗಲಿ ಅವರು ಇರುವ ಕಾರಣ ಚುನಾವಣೆ ಕಾವು ದಿನ ದಿನೇ ಹೆಚ್ಚಾಗುವ ಸಾಧ್ಯತೆ ಇದೆ.

ಸಾಮಾನ್ಯ ವರ್ಗದಲ್ಲಿ–

ಚಂದ್ರಕಾಂತ್ ಬೋರಗಿ, ನಾಗನಾಥ ಬಿರಾದಾರ, ಬಸವರಾಜ ಧನಶ್ರೀ, ಮಲ್ಲನಗೌಡ ಪಾಟೀಲ, ಯಶವಂತರಾಯಗೌಡ ಪಾಟೀಲ, ರೇವಗೊಂಡಪ್ಪ ಪಾಟೀಲ, ಸಿದ್ದಣ್ಣ ಬಿರಾದಾರ ಡಾ.ಸಾರ್ವಭೌಮ ಬಗಲಿ ಕಣದಲ್ಲಿದ್ದಾರೆ.

ಪರಿಶಿಷ್ಟ ಜಾತಿ ಮೀಸಲು ಸ್ಥಾನದಲ್ಲಿ–

ಅಶೋಕ್ ಗಜಾಕೋಶ, ಮುತ್ತಪ್ಪ ಪೋತೆ ಕಣದಲ್ಲಿದ್ದಾರೆ,

ಮಹಿಳಾ ಮೀಸಲು ಸ್ಥಾನದಲ್ಲಿ–

ದಾನವ್ವ ಬಿರಾದಾರ ಉರ್ಫ ಪಾಟೀಲ, ಲಲಿತಾ ನಡಿಗೇರಿ, ಸರೋಜಿನಿ ಪಾಟೀಲ ಕಣದಲ್ಲಿ ಉಳಿದಿದ್ದಾರೆ.

ಐದು ಸ್ಥಾನಗಳು ಅವಿರೋಧ–

ಹಿಂದುಳಿದ ವರ್ಗ "ಅ" ಮೀಸಲು ಸ್ಥಾನದಿಂದ ಜಟ್ಟೆಪ್ಪ ರವಳಿ,

ಹಿಂದುಳಿದ ವರ್ಗ "ಬ" ಮೀಸಲು ಸ್ಥಾನದಿಂದ ಬಸಣ್ಣ ಮ. ಕೋರೆ,

"ಪರಿಶಿಷ್ಠ ಪಂಗಡ" ಮೀಸಲು ಸ್ಥಾನದಿಂದ– ಸುರೇಶಗೌಡ ರಾ, ಪಾಟೀಲ,

"ಸಹಕಾರ ಸಂಘಗಳ ಮತಕ್ಷೇತ್ರ ಬ" ವರ್ಗದಿಂದ ವಿಶ್ವನಾಥ ಷ. ಬಿರಾದಾರ (ಬರಡೋಲ)

"ಕಬ್ಬು ಬೆಳೆಗಾರರಲ್ಲದ ಮತಕ್ಷೇತ್ರ ಡ" ವರ್ಗದಿಂದ ವಿಶ್ವನಾಥ ಮ. ಬಿರಾದಾರ (ಇಂಡಿ) ಇವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಕಣದಲ್ಲಿರುವ ಅಭ್ಯರ್ಥಿಗಳಿಗೆ ಪ್ರಚಾರ ಚಿನ್ಹೆ ಸಹ ನೀಡಿದ್ದು ಫೆ. 11 ರಂದು ಚುನಾವಣೆ ನಡೆಯಲಿದೆ ಎಂದು ಚುನಾವಣಾಧಿಕಾರಿ, ಕಂದಾಯ ಉಪವಿಭಾಗ ಅಧಿಕಾರಿ ಅಬೀದ್ ಗದ್ಯಾಳ ತಿಳಿಸಿದ್ದಾರೆ.

## ಕರ್ನಾಟಕ ಒನ್ ಫ್ರಾಂಚೈಸಿ ಕೇಂದ್ರ ಸ್ಥಾಪನೆಗೆ ಆನ್‌ಲೈನ್ ಅರ್ಜಿ ಆಹ್ವಾನ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲೆಯ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕರ್ನಾಟಕ ಒನ್ ಯೋಜನೆಯನ್ನು ವಿಸ್ತರಿಸಲು ಫ್ರಾಂಚೈಸಿಗಳ ಮೂಲಕ ಅನುಷ್ಠಾನಗೊಳಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ಹೆಚ್ಚುವರಿಯಾಗಿ ಕರ್ನಾಟಕ ಒನ್ ಕೇಂದ್ರಗಳನ್ನು ಸ್ಥಾಪಿಸಲು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ವಿಜಯಪುರ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 03, ಇಂಡಿ 03, ಮುದ್ದೇಬಿಹಾಳ 02, ಸಿಂದಗಿ 02, ತಾಳಿಕೋಟೆ 02 ಹಾಗೂ ಆಲಮೇಲ ವ್ಯಾಪ್ತಿಯಲ್ಲಿ 01 ಸೇರಿದಂತೆ ಒಟ್ಟು 13 ಫ್ರಾಂಚೈಸಿ ಕೇಂದ್ರ ಸ್ಥಾಪನೆಗೆ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ದಿನಾಂಕ : 15–02–2024 ರೊಳಗಾಗಿ ್ಞಣಣಠಿ://ತಿತಿತಿ.ಇಚಿಡಿಟಿಚಿಣಚಿಞಚಿಂಟಿಜ.ರಿಠತ.ಟಿ/ಕಿಣಭಟುಭಿ/ಈಡಿಚಿಟಿಛಿಜಜಖಿಜಡಿಥಿ ಲಿಂಕ್ ಮೂಲಕ ಕರ್ನಾಟಕ ಒನ್ ಫ್ರಾಂಚೈಸಿ ಕೇಂದ್ರಗಳ ಸ್ಥಾಪನೆಗೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳ ಪ್ರಕಟಣೆ ತಿಳಿಸಿದೆ.

## ಉಚಿತ ಕಾನೂನು ಸಲಹೆ–ನೆರವು ಪಡೆಯಲು ಸಹಾಯವಾಣಿ ಆರಂಭ

ಉದಯರಶ್ಮಿ ನ್ಯೂಸ್

ವಿಜಯಪುರ: ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ವತಿಯಿಂದ ಸಾರ್ವಜನಿಕರು, ಕಕ್ಷಿದಾರರು ಉಚಿತವಾಗಿ ಕಾನೂನು ಸಲಹೆ ಹಾಗೂ ನೆರವು ಪಡೆಯಲು ರಾಷ್ಟ್ರೀಯ ಸಹಾಯವಾಣಿ ಸಂಖ್ಯೆ :15100 ಆರಂಭಿಸಿದ್ದು, ಈ ಸಹಾಯವಾಣಿಗೆ ಕರೆ ಮಾಡಿ ಕಾನೂನು ನೆರವಿಗೆ ಸಂಬಂಧಿಸಿದಂತೆ ಮಾಹಿತಿಯನ್ನು ಅನುಭವಿ ವಕೀಲರಿಂದ ಕನ್ನಡದಲ್ಲಿಯೇ ಪಡೆಯಬಹುದಾಗಿದೆ ಎಂದು ಹಿರಿಯ ಸಿವ್ಹಿಲ್ ನ್ಯಾಯಾಧೀಶರಾದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಂತೋಷ ಕುಂದರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಡಿನ ಪತ್ರಕರ್ತರಿಗೆ ಧನ್ಯವಾದ..

ಉದಯರಶ್ಮಿ ನ್ಯೂಸ್

ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯುಜೆ) ದಾವಣಗೆರೆಯಲ್ಲಿ ಎರಡು ದಿನ ಆಯೋಜಿಸಿದ್ದ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದ ಅರ್ಥಪೂರ್ಣವಾಗಿ ತೆರೆಕಂಡಿದೆ. ಅದಕ್ಕಾಗಿ ದಾವಣಗೆರೆ ಜಿಲ್ಲಾ ಘಟಕ ಸೇರಿದಂತೆ ಎಲ್ಲರಿಗೂ ಧನ್ಯವಾದಗಳು.

ಮಧ್ಯ ಕರ್ನಾಟಕದ ದೇವನಗರಿ, ಬೆಣ್ಣೆ ನಗರಿ ಎಂದೇ ಹೆಸರುವಾಸಿಯಾದ ದಾವಣಗೆರೆಗೆ ನಾಡಿನಾದ್ಯಂತ ಐದು ಸಾವಿರಕ್ಕೂ ಹೆಚ್ಚು ಪತ್ರಕರ್ತರು ಬಂದು ನಮ್ಮ ಮನೆಯ ಕಾರ್ಯಕ್ರಮ ಎನ್ನುವಷ್ಟರ ಮಟ್ಟಿಗೆ ಸಮ್ಮೇಳನದ ಮೆರಗು ಹೆಚ್ಚಿಸಿದ್ದು ಅವಿಸ್ಮರಣೀಯ.

ಕೆಯುಡಬ್ಲ್ಯುಜೆ ವ್ಯಾಪ್ತಿ ಮತ್ತು ಶಕ್ತಿ ಇಮ್ಮಡಿಯಾಗಿರುವುದನ್ನು ಸಮ್ಮೇಳನ ಮತ್ತೊಮ್ಮೆ ನಿರೂಪಿಸಿದೆ.


ಎರಡು ದಿನಗಳಲ್ಲಿ ನಡೆದ ನಾಲ್ಕು ವಿಚಾರಗೋಷ್ಠಿಗಳು, ಸಂವಾದ ಸುದ್ದಿ ಮನೆಗೆ ಹೊಸ ಮುನ್ನೋಟವನ್ನು ನೀಡಿದೆ. ಸಾಧಕ ಬಾಧಕಗಳ ಬಗ್ಗೆ ವಿಚಾರ ಮಂಥನವಾಗಿರುವುದು ಸುದ್ದಿ ಮನೆಗೆ ಪ್ರಜ್ವಲವಾದ ಬೆಳಕು ನೀಡಿದೆ.

ನಾನಾ ಧೋರಣೆ ಹೊಂದಿದವರನ್ನೆಲ್ಲ ಒಂದು ವೇದಿಕೆಗೆ ತರುವುದು ಮತ್ತು ಎಲ್ಲರನ್ನೊಳಗೊಳ್ಳುವ ಸಮ್ಮೇಳನವನ್ನಾಗಿ ಸಂಘಟಿಸುವುದು ನಿಜಕ್ಕೂ ಸವಾಲು. ಹಲವು ವೈರುಧ್ಯಗಳ ನಡುವೆ ಆ ಸವಾಲುಗಳನ್ನು ದಾಟಿರುವುದು ಸಮಾಧಾನ ಸಂಗತಿ.

ಸಮ್ಮೇಳನ ಹಬ್ಬದ ಸಡಗರದಲ್ಲಿ ನಡೆಯುವಂತೆ ಸಂಘಟಿಸಲು

ಶ್ರಮಿಸಿದ ದಾವಣಗೆರೆ ಜಿಲ್ಲಾ ಘಟಕದ ಅಧ್ಯಕ್ಷ ಮಂಜುನಾಥ್ ನೇತೃತ್ವದ ಎಲ್ಲಾ ಪದಾಧಿಕಾರಿಗಳು ಮತ್ತು ಸದಸ್ಯರಿಗೆ ವಿಶೇಷ ಧನ್ಯವಾದಗಳು.

ಊಟ, ತಿಂಡಿ ಜೊತೆಗೆ ಆತಿಥ್ಯ ವಹಿಸುವುದರಲ್ಲಿ ದಾವಣಗೆರೆ ಎತ್ತಿದ ಕೈ ಎನ್ನುವುದನ್ನು ಬೆಣ್ಣೆ ನಗರಿಯ ಸಮ್ಮೇಳನ ಮತ್ತೊಮ್ಮೆ ನಿರೂಪಿಸಿದೆ. ಅದಕ್ಕಾಗಿ ಸಂಘದ ಪ್ರತಿ ಸದಸ್ಯರಿಗೂ, ತೆರೆ ಮರೆಯಲ್ಲಿ ಸಹಕರಿಸಿದವರಿಗೆ, ಪ್ರತ್ಯಕ್ಷ ಮತ್ತು ಪರೋಕ್ಷವಾಗಿ ಮಾರ್ಗದರ್ಶನ ಮಾಡಿ ಕೊನೆಯ ತನಕ ಬೆಂಬಲವಾಗಿ ನಿಂತವರಿಗೆ, ಅದಕ್ಕಿಂತಲೂ ಹೆಚ್ಚಾಗಿ ಉತ್ಸಾಹದಿಂದ ಎರಡೂ ದಿನ ಸಕ್ರಿಯವಾಗಿ ಸಮ್ಮೇಳನದಲ್ಲಿ ಭಾಗಿಯಾಗಿದ್ದ ತಮಗೆಲ್ಲರಿಗೂ ಅಭಿನಂದನೆಗಳು. ಇದರಾಚೆಗೂ ಲೋಪದೋಷಗಳಾಗಿದ್ದರೆ ಅದಕ್ಕೆ ಕ್ಷಮೆ ಇರಲಿ.



ಮುಂದಿನ ರಾಜ್ಯ ಸಮ್ಮೇಳನದ ತೇರು ಎಳೆಯುವ ಸಂಕಲ್ಪ ತೊಟ್ಟಿರುವ ತುಮಕೂರು ಜಿಲ್ಲೆ ಎಲ್ಲವನ್ನೂ ಮೀರುವ ಹಾಗೆ ಸಮ್ಮೇಳನ ಮಾಡಲಿ ಎಂದು ನಿರೀಕ್ಷಿಸೋಣ.

ಸಮ್ಮೇಳನ ಅರ್ಥಪೂರ್ಣವಾಗಿಸಿದ ನಿಮ್ಮೆಲ್ಲರಿಗೂ, ದಾವಣಗೆರೆ ಜಿಲ್ಲಾ ಘಟಕಕ್ಕೂ ಮತ್ತೊಮ್ಮೆ ಧನ್ಯವಾದಗಳು.

– ಶಿವಾನಂದ ತಗಡೂರು
ರಾಜ್ಯಾಧ್ಯಕ್ಷರು,
ಕೆಯುಡಬ್ಲ್ಯೂಜೆ.

# ಪಾರಂಪರಿಕ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆ

ಉದಯರಶ್ಮಿ ನ್ಯೂಸ್




ವಿಜಯಪುರ: ಐತಿಹಾಸಿಕ ಪಾರಂಪರಿಕ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ ಎಂದು ಜಿ. ಎಫ್. ಜಿ. ಸಿ ಕಾಲೇಜಿನ ನಿವೃತ್ತ ಪ್ರಾಧ್ಯಾಪಕ ಡಾ. ಬಿ. ಜಿ. ಪತ್ತಾರ ಹೇಳಿದ್ದಾರೆ.

ನಗರದ ಬಿ. ಎಲ್. ಡಿ. ಇ ಸಂಸ್ಥೆಯ ಎಸ್. ಬಿ. ಕಲಾ ಮತ್ತು ಕೆ. ಸಿ. ಪಿ ವಿಜ್ಞಾನ ಮಹಾವಿದ್ಯಾಲಯದಲ್ಲಿ ಗುರುವಾರ ಐಕ್ಯೂಎಸಿ ಮತ್ತು ಹೆ–ರಿಟೇಜ್ ಕ್ಲಬ್ ಸಹಯೋಗದಲ್ಲಿ ನಡೆದ ಐತಿಹಾಸಿಕ ಪಾರಂಪರಿಕ ತಾಣಗಳ ಮಹತ್ವ ಮತ್ತು ಅವುಗಳ ಸಂರಕ್ಷಣೆ ಕುರಿತು ಕಾರ್ಯಕ್ರಮದಲ್ಲಿ ಅವರು ವಿಶೇಷ ಉಪನ್ಯಾಸ ನೀಡಿದರು.

ಇತಿಹಾಸವನ್ನು ಮರೆತವರು ಎಂದಿಗೂ ಇತಿಹಾಸ ನಿರ್ಮಿಸಲಾರರು. ಐತಿಹಾಸಿಕ ಪಾರಂಪರಿಕ ತಾಣಗಳ ಸಂರಕ್ಷಣೆ ನಮ್ಮೆಲ್ಲರ ಹೊಣೆಯಾಗಿದೆ. ಈ ಹಿನ್ನೆಲೆಯಲ್ಲಿ ಇತಿಹಾಸ ಅಧ್ಯಯನ ಮಾಡಬೇಕು. ಆಗ ಮಾತ್ರ ಅದರ ಆಳ, ಅಗಲ ಅರಿವಾಗುತ್ತದೆ. ಭಾರತ ಅತ್ಯಂತ ಭವ್ಯವಾದ ಸಾಂಸ್ಕೃತಿಕ, ಐತಿಹಾಸಿಕ, ಪಾರಂಪರಿಕ ನೆಲೆ ಬೀಡಾಗಿದೆ. ನಮ್ಮ ದೇಶವು ಹಲವಾರು ಇತಿಹಾಸದ ಕುರುಹುಗಳನ್ನು ಹೊಂದಿದ್ದು, ಅವುಗಳ ಸಂರಕ್ಷಣೆ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ವಿದ್ಯಾರ್ಥಿಗಳು ಇಂಥ ಪಾರಂಪ–ರಿಕ ತಾಣಗಳ ಬಗ್ಗೆ ಅಧ್ಯಯನ ಮಾಡಬೇಕು. ತಮ್ಮ ಮೂರು ವರ್ಷದ ಅವಧಿಯ ನಿರಂತರ ಕಲೆಯಲ್ಲಿ ಮಾಹಿತಿಯನ್ನು ಪಡೆದುಕೊಂಡು ಆಳವಾಗಿ ಅಧ್ಯಯನ ಮತ್ತು ಸಂಶೋಧನೆಗೆ ಮುಂದಾಗಬೇಕು ಎಂದು ಅವರು ಹೇಳಿದರು.

ವಿಜಯಪುರಕ್ಕೆ ಅದಿಲ್ ಶಾಹಿಗಳ ಕೊಡುಗೆ ಅಪಾರ. ಅವರು ನೀಡಿರುವ ಸಾಂಸ್ಕೃತಿಕ, ಸಾಹಿತ್ಯ ಕಲೆಗಳು ಗಮನಾರ್ಹವಾಗಿವೆ. ಇವುಗಳ ಕುರಿತು ಅರಿವು ಮೂಡಿಸುವುದು ಇಲಾಖೆ ಮತ್ತು ಸಾರ್ವಜನಿಕರ ಹೊಣೆಯಾಗಿದೆ ಎಂದು ಅವರು ಹೇಳಿದರು.

ಈ ವೇಳೆಯಲ್ಲಿ ಐಕ್ಯುಎಸಿ ಸಂಂ–ಯೋಜಕ ಡಾ. ಪಿ. ಎಸ್. ಪಾಟೀಲ ಮಾತನಾಡಿ, ವಿದ್ಯಾರ್ಥಿಗಳು ನಿರಂತರ ಅಧ್ಯಯನಶೀಲರಾಗಬೇಕು. ಐತಿಹಾಸಿಕ ಪಾರಂಪರಿಕ ತಾಣಗಳು ಅಧ್ಯಯನ ಮತ್ತು ಅದರ ಸಂರಕ್ಷಣೆಗೆ ಮುಂದಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮಹಾವಿದ್ಯಾಲಯದ ಹೆರಿಟೇಜ್ ಕ್ಲಬ್ ಮುಖ್ಯಸ್ಥ ಡಾ. ಎಂ. ಬಿ. ಪಾಟೀಲ, ಮಹಾವಿದ್ಯಾಲಯದ ಬೋಧಕ, ಬೋಧಕರ ಹೊರತಾದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಇತಿಹಾಸ ವಿಭಾಗದ ಮುಖ್ಯಸ್ಥ ಪ್ರೊ. ಐ. ಎಸ್. ಹೂಗಾರ ಸ್ವಾಗತಿಸಿ ಪರಿಚಯಿಸಿದರು. ಪ್ರೊ. ಶ್ವೇತಾ ಸವಣೂರ ನಿರೂಪಿಸಿದರು. ಪ್ರೊ. ರಾಜೇಶ್ವರಿ ಪುರಾಣಿಕ ವಂದಿಸಿದರು.

# ಶ್ರದ್ಧೆ, ಕಠಿಣ ಪರಿಶ್ರಮದಿಂದ ಸಾಧನೆ ಸಾಧ್ಯ :ರಾಜೇಶ್ವರಿ ಗಾಯಕವಾಡ

ಉದಯರಶ್ಮಿ ನ್ಯೂಸ್




ವಿಜಯಪುರ: ಸತತ ಪರಿಶ್ರಮ, ಶ್ರದ್ಧೆ ಮತ್ತು ಶಿಸ್ತಿನಿಂದ ಕ್ರೀಡೆಗಳಲ್ಲಿ ಉನ್ನತ ಸಾಧನೆ ಮಾಡಬಹುದು. ಇಲ್ಲಿ ಯಾವುದೇ ಶಾರ್ಟ್ ಕಟ್ ಇರುವುದಿಲ್ಲ ಎಂದು ಅಂತಾರಾಷ್ಟ್ರೀಯ ಖ್ಯಾತಿಯ ಮಹಿಳಾ ಕ್ರಿಕೆಟ್ ಆಟಗಾರ್ತಿ ರಾಜೇಶ್ವರಿ ಗಾಯಕವಾಡ ಹೇಳಿದ್ದಾರೆ.

ನಗರದ ಬಿ.ಎಲ್.ಡಿ.ಇ ಡೀಮ್ಡ್ ವಿಶ್ವವಿದ್ಯಾಲಯದ ಶ್ರೀ ಬಿ. ಎಂ. ಪಾಟೀಲ ಮೆಡಿಕಲ್ ಕಾಲೇಜಿನ ಕ್ರೀಡಾಂಗಣದಲ್ಲಿ ಅಂತಾರಾಷ್ಟ್ರೀಯ ಖ್ಯಾತಿಯ ಅಥ್ಲೀಟ್ ಮತ್ತು ಖ್ಯಾತ ವೈದ್ಯ ದಿ. ಡಾ. ಸಿ. ಆರ್. ಬಿದ–ರಿಯವರ ಪುಣ್ಯಸ್ಮರಣೆ ಅಂಗವಾಗಿ ಇಂದು ರವಿವಾರ ಆಯೋಜಿಸಲಾಗಿದ್ದ ಬಿ. ಎಲ್. ಡಿ. ಇ ಸಂಸ್ಥೆಯ 9ನೇ ಅಂತರ ಶಾಲಾ ಕಾಲೇಜುಗಳ ಅಥ–ಲೇಟಿಕ್ ಕ್ರೀಡಾಕೂಟ ಉದ್ಘಾಟಿಸಿ ಅವರು ಮಾತನಾಡಿದರು.

ಕ್ರೀಡಾಪಟುಗಳು ತಾವು ಇಷ್ಟಪಡುವ ಕ್ರೀಡೆಯಲ್ಲಿ ಯಶಸ್ವಿಯಾಗಬೇಕಾದರೆ ಕಠಿಣ ಪರಿಶ್ರಮ, ಸಮರ್ಪಣೆ ಮನೋಭಾವ, ಕ್ರೀಡಾಸ್ಪೂರ್ತಿ ಮುಖ್ಯವಾಗಿದೆ. ಇಲ್ಲಿ ಯಾವುದೇ ಅಡ್ಡಮಾರ್ಗಗಳ ಮೂಲಕ ಸಾಧನೆ ಮಾಡಲು ಸಾಧ್ಯವಿಲ್ಲ. ಶ್ರಮಪಟ್ಟರೆ ಅದಕ್ಕೆ ತಕ್ಕ ಪ್ರತಿಫಲ ಸಿಗುತ್ತದೆ. ಫೆಬ್ರವರಿ 23ರಿಂದ ಬೆಂಗಳೂರಿನಲ್ಲಿ ವುಮೆನ್ಸ್ ಪ್ರೀಮಿಯರ್ ಲೀಗ್(ಡಬ್ಲ್ಯೂಪಿ–ಎಲ್) ಪ್ರಾರಂಭವಾಗುತ್ತಿದೆ. ವಿಜಯಪುರ ಜಿಲ್ಲೆಯ ಜನ ನನಗೆ ಬೆಂಬಲ ನೀಡಬೇಕು ಎಂದು ರಾಜೇಶ್ವರ ಗಾಯಕವಾಡ ಮನವಿ ಮಾಡಿದರು.

ಬಿ.ಎಲ್.ಡಿ.ಇ ಡೀಮ್ಡ್ ವಿವಿಯ ಉಪಕುಲಪತಿ ಡಾ. ಆರ್. ಎಸ್. ಮುಧೋಳ ಮಾತನಾಡಿ, ಕ್ರೀಡಾಕೂಟಗಳು ವಿದ್ಯಾರ್ಥಿಗಳಿಗೆ ಸ್ನೇಹ ಬೆಳೆಸಿಕೊಳ್ಳಲು, ನಾಯಕತ್ವ ಗುಣ ಅಳವಡಿಸಿಕೊಳ್ಳಲು ಹಾಗೂ ಸಾಧನೆ ಮಾಡಲು ಅವಕಾಶ ಕಲ್ಪಿಸುತ್ತವೆ. ಬಿ.ಎಲ್.ಡಿ.ಇ ಸಂಸ್ಥೆ ವಿದ್ಯಾರ್ಥಿಗಳಿಗೆ ಶಿಕ್ಷಣದ ಜೊತೆ, ಕ್ರೀಡೆ, ಸಾಂಸ್ಕೃತಿಕ ಚಟುವಟಿಕೆಗಳು, ಮಾನವೀಯತೆ ನಿಲುವಿನ ಶಿಕ್ಷಣ ನೀಡುತ್ತಿದೆ. ವಿದ್ಯಾರ್ಥಿಗಳು ಮತ್ತು ಕ್ರೀಡಾಪಟುಗಳು ಎಲ್ಲ ಕ್ಷೇತ್ರಗಳಲ್ಲಿ ಕ್ರೀಡಾಸ್ಪೂರ್ತಿ ಮತ್ತು ಶ್ರದ್ಧಾ ಭಕ್ತಿಯಿಂದ ಪಾಲ್ಗೊಂಡು ಉತ್ತಮ ಸಾಧನೆ ಮಾಡಬೇಕು. ಸಂಸ್ಥೆಯ ಅಧ್ಯಕ್ಷ ಮತ್ತು ಸಚಿವ ಎಂ. ಬಿ. ಪಾಟೀಲ ಅವರು ಶಿಕ್ಷಕರು ಮತ್ತು ವಿದ್ಯಾರ್ಥಿಗಳಿಗೆ ಪಠ್ಯ ಮತ್ತು ಪಠ್ಯಕ್ಕೆ ಪೂರಕವಾದ ಎಲ್ಲ ಚಟುವಟಿಕೆಗಳಿವೆ ಉತ್ತೇಜನ ನೀಡುತ್ತಿದ್ದಾರೆ ಎಂದು ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಕ್ರೀಡಾ ನಿರ್ದೇಶಕ ಎಸ್. ಎಸ್. ಕೋರಿ ಪ್ರಾಸ್ತಾವಿಕವಾಗಿ ಮಾತನಾಡಿ, ಕ್ರೀಡಾ ಸಂಸ್ಕೃತಿಗೆ ಉತ್ತೇಜನ ನೀಡಲು ಡಾ. ಸಿ. ಆರ್. ಬಿದರಿ ಸ್ಮರಣೆಯಲ್ಲಿ ಕ್ರೀಡಾಕೂಟ ಆಯೋಜನೆ ಮಾಡಲಾಗಿದೆ. ಈ ವರ್ಷ ಬಿ.ಎಲ್.ಡಿ.ಇ ಸಂಸ್ಥೆಯ 17 ಕ್ರೀಡಾಪಟುಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದ ಕ್ರೀಡಾಕೂಟಗಳಲ್ಲಿ ಸಾಧನೆ ಮಾಡಿದ್ದಾರೆ. ರಾಜೇಶ್ವರಿ ಗಾಯಕವಾಡ ಕೂಡ ಬಿ.ಎಲ್.ಡಿ.ಇ ಸಂಸ್ಥೆಯ ಹಳೆಯ ವಿದ್ಯಾರ್ಥಿನಿಯಾಗಿರುವುದು ಎಲ್ಲರಿಗೂ ಹೆಮ್ಮೆ ತಂದಿದೆ ಎಂದು ಹೇಳಿದರು.

ಬಿ.ಎಲ್.ಡಿ.ಇ ಸಂಸ್ಥೆಯ ಮುಖ್ಯ ಆಡಳಿತಾಧಿಕಾರಿ ಡಾ. ಆರ್. ಬಿ. ಕೊಟ್ನಾಳ, ಆಡಳಿತಾಧಿಕಾರಿ ಐ. ಎಸ್. ಕಾಳಪ್ಪನವರ ಕ್ರೀಡಾ ಧ್ವಜಾರೋಹಣ ಮಾಡಿದರು. ರಾಜೇಶ್ವರಿ ಗಾಯಕವಾಡ ಬಲೂನು ಗಾಳಿಯಲ್ಲಿ ಹಾರಿ ಬಿಡುವ ಮೂಲಕ ಕ್ರೀಡಾಪಟುಗಳಿಗೆ ಶುಭ ಕೋರಿದರು. ಕ್ರೀಡಾಪಟುಗಳಾದ ಗೌರಿ ಹಿರೇಮಠ ಮತ್ತೀತರು ಕ್ರೀಡಾ ಜ್ಯೋತಿಯನ್ನು ರಾಜೇಶ್ವರಿ ಗಾಯಕವಾಡ ಅವರಿಗೆ ನೀಡಿದರು.

ಈ ಸಂದರ್ಭದಲ್ಲಿ ಡಾ. ಸಿ. ಆರ್. ಬಿದರಿ ಕುಟುಂಬದ ಪರವಾಗಿ ಅವರ ಸೊಸೆ ಮತ್ತು ಖ್ಯಾತ ವೈದ್ಯೆ ಡಾ. ಶೈಲಜಾ ಆರ್. ಬಿದರಿ, ಉಪಕುಲಪತಿ ಡಾ. ಆರ್. ಎಸ್. ಮುಧೋಳ ಹಾಗೂ ಮುಖ್ಯ ಆಡಳಿತಾಧಿಕಾರಿ ಆರ್. ಬಿ. ಕೊಟ್ನಾಳ ಅವರು ರಾಜೇಶ್ವರಿ ಗಾಯಕವಾಡ ಅವರನ್ನು ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ. ವಿ. ಜಿ. ಸಂಗಮ, ಬಿ.ಎಲ್.ಡಿ.ಇ ಡೀಮ್ಡ್ ವಿವಿ ರಜಿಸ್ಟಾರ್ ಡಾ. ಆರ್. ವಿ. ಕುಲಕರ್ಣಿ, ಸಂಸ್ಥೆಯ ಆಡಳಿತಾಧಿಕಾರಿ ಬಿ. ಆರ್. ಪಾಟೀಲ, ಎಸ್. ಎಚ್. ಲಗಳಿ, ದೈಹಿಕ ಉಪನಿರ್ದೇಶ ಕೈಲಾಸ ಹಿರೇಮಠ, ಭಾರತಿ ಪಾಟೀಲ, ರಾಜೇಶ್ವರಿ ಗಾಯಕವಾಡ ಕುಟುಂಬ ಸದಸ್ಯರು, ಎಂಜಿನಿಯರಿಂಗ್ ಕಾಲೇಜಿನ ಪಿ. ವಿ. ಮಾಗಿ, ಉಮೇಶ ದೀಕ್ಷಿತ, ರಮೇಶ ಜೀರಗಾಳ, ಡಾ. ನವೀನ ದೇಸಾಯಿ, ಪ್ರೊ. ಗಿರೀಶ ಕುಲಕರ್ಣಿ, ಐ. ಎಸ್. ಇಕ್ಕಳಕಿ, ಡಾ. ಎ. ಎಸ್. ಜಾಧವ, ವೈ. ಎ. ಕುಲಕರ್ಣಿ, ಪ್ರೊ. ಎಸ್. ಎಸ್. ಚಪ್ಪಾರ, ಪ್ರೊ. ಶಿಲ್ಪಾ ಪಾಟೀಲ ಮುಂತಾದವರು ಉಪಸ್ಥಿತರಿದ್ದರು.

ಬಿ.ಎಲ್.ಡಿ.ಇ ಸಂಸ್ಥೆಯ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿನ ಪ್ರಥಮ ವರ್ಷದ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಕಾಲೇಜಿನ ಉಪಪ್ರಾಚಾರ್ಯೆ ಗೀತಾಂಜಲಿ ಪಾಟೀಲ ಸ್ವಾಗತಿಸಿದರು. ಕ್ರೀಡಾಪಟು ನೀಲಮ್ಮಾ ರಾಠೋಡ ಕ್ರೀಡಾಪಟುಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಕಾಲೇಜಿನ ಕ್ರೀಡಾ ನಿರ್ದೇಶಕ ಐ. ಎಸ್. ಇಕ್ಕಳಕಿ ವಂದಿಸಿದರು. ಆಶಾ ಎಂ. ಪಾಟೀಲ ನಿರೂಪಿಸಿದರು.

ದಿನವಿಡೀ ನಾನಾ ಅಥ್ಲೇಟಿಕ್ ಸ್ಪರ್ಧೆಗಳು ನಡೆದವು.

# ಮಠಗಳಿಂದ ಜನಪರ ಕಾರ್ಯ :ಬಿ.ವೈ.ವಿಜಯೇಂದ್ರ

ಉದಯರಶ್ಮಿ ನ್ಯೂಸ್



ಬಸವನ ಬಾಗೇವಾಡಿ: ನಾಡಿನಲ್ಲಿ ಮಠಗಳು ಬಸವಣ್ಣನವರ ಕಾಯಕ, ದಾಸೋಹ ತತ್ವ ಅಳವಡಿಸಿಕೊಳ್ಳುವ ಮೂಲಕ ಜನಪರ ಕಾರ್ಯಗಳನ್ನು ಮಾಡುತ್ತಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದರು.

ತಾಲೂಕಿನ ಮನಗೂಳಿಯಲ್ಲಿ ಲಿಂ.ಡಾ.ಮಹಾಂತ ಶಿವಾಚಾರ್ಯ ಸ್ವಾಮೀಜಿಯವರ 11ನೇ ಪುಣ್ಯಾರಾಧನೆ, ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿಯವರ ಪಟ್ಟಾಧಿಕಾರದ ದಶಮಾನೋತ್ಸವ, ಸಂಗನಬಸವ ಕಲ್ಯಾಣಮಂಟಪ, ನೂತನ ರಥ–ೋತ್ಸವ ಲೋಕಾರ್ಪಣೆ ಸಾಮೂಹಿಕ ವಿವಾಹದ ಅಂಗವಾಗಿ ಭಾನುವಾರ ಹಮ್ಮಿಕೊಂಡಿದ್ದ ಧರ್ಮಸಭೆ ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ಮಠಗಳು ನಾಡಿನ ಅಭಿವೃದ್ಧಿ ಶ್ರಮಿಸುತ್ತಿರುವದು ಶ್ಲಾಘನೀಯ. ರಾಜ್ಯಕ್ಕೆ ಶಕ್ತಿ ತುಂಬುವ ಕೆಲಸ ಮಠಗಳು ಮಾಡುತ್ತಿವೆ ಎಂದು ಹೇಳಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪನವರು ಮಠಗಳ ಅಭಿವೃದ್ಧಿಗೆ ಆರ್ಥಿಕ ಶಕ್ತಿ ತುಂಬುವ ಕೆಲಸ ಮಾಡಿದ್ದಾರೆ. ಮಠಾಧೀಶರ, ಜನರ ಆಶೀರ್ವಾದದಿಂದ ನಾಲ್ಕು ಬಾರಿ ಮುಖ್ಯಮಂತ್ರಿಯಾಗಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಿದ್ದಾರೆ. ರೈತ ಕುಟುಂಬದಲ್ಲಿ ಜನಿಸಿರುವ ನನ್ನ ತಂದೆ ರೈತರು, ಸೈನಿಕರನ್ನು ಎರಡು ಕಣ್ಣುಗಳೆಂದು ತಿಳಿದು ರೈತರ ಹೆಸ–ರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ್ದರು ಎಂದು ಹೇಳಿದರು.

ರಾಜ್ಯದಲ್ಲಿ ಭೀಕರ ಬರಗಾಲ ಇದೆ. ತೋಟಗಾರಿಕೆ ಬೆಳೆಗೆ ಸಮರ್ಪಕ ವಿದ್ಯುತ್ ಸಿಗುತ್ತಿಲ್ಲ. ರೈತರು ಮಕ್ಕಳೊಂದಿಗೆ ಗೂಳೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಮುಂಬರುವ ದಿನಗಳಲ್ಲಿ ಸರಿಯಾದ ಮಳೆ, ಬೆಳೆ ಬರಲಿ ಎಂದು ಪ್ರಾರ್ಥಿಸುತ್ತೇನೆ. ನನ್ನ ಜೀವನವನ್ನು ರೈತರ ಪರವಾಗಿ ಮುಡಿಪಾಗಿಡುತ್ತೇನೆ ಎಂದು ಹೇಳಿದರು.

ಸಾನಿಧ್ಯ ವಹಿಸಿದ್ದ ಹುಬ್ಬಳ್ಳಿಯ ಡಾ.ಗುರುಸಿದ್ದ ರಾಜಯೋಗೀಂದ್ರ ಸ್ವಾಮೀಜಿ ಮಾತನಾಡಿ, ಸಂಘಟನೆ, ಶಿಕ್ಷಣ, ದಾಸೋಹ, ಸಮಾನತೆ, ಧರ್ಮ ಪ್ರಚಾರವನ್ನು ಮೂಲವಾಗಿಟ್ಟುಕೊಂಡು ಮಠಗಳು ಅಸ್ತಿತ್ವಕ್ಕೆ ಬಂದಿವೆ. ಸಾಹಿತ್ಯ ಕ್ಷೇತ್ರಕ್ಕೆ ಕೊಡುಗೆ ನೀಡಿವೆ. ಸಮಾಜದಲ್ಲಿ ಸಾಮರಸ್ಯ ತರುವ ಮೂಲಕ ಸ್ವಾಸ್ಥ್ಯ ಕಾಪಾಡುವ ಕೆಲಸ ಮಾಡುತ್ತಿವೆ. ಮಠಗಳಲ್ಲಿ ಜಾತಿ ವ್ಯವಸ್ಥೆ ಇರುವುದಿಲ್ಲ. ನಮ್ಮ ಮಠಕ್ಕೆ ಬರುವ ಜನರಿಗೆ ಜಾತಿ ಕೇಳುವುದಿಲ್ಲ. ಸಹಪಂಕ್ತಿ ಭೋಜನ ಮೂಲಕ ಸಮಾನತೆ ಎತ್ತಿಹಿಡಿದಿದ್ದೇವೆ ಎಂದು ಹೇಳಿದರು.

ಗದಗದ ಡಾ.ತೋಂಟದ ಸಿದ್ಧರಾಮ ಸ್ವಾಮೀಜಿ ಮಾತನಾಡಿ, ಭಕ್ತರ ಕಲ್ಯಾಣೋತ್ಸವಕ್ಕಾಗಿ ಅಭಿನವ ಸಂಗನಬಸವ ಶ್ರೀಗಳು ಬೃಹತ್ ಕಲ್ಯಾಣ ಮಂಟಪ ನಿರ್ಮಿಸಿದ್ದಾರೆ. ಅದನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ ಬೆಳೆಸಬೇಕು. ಲಿಂ.ಮಹಾಂತ ಶ್ರೀಗಳು ತಮ್ಮ ಅಪಾರ ಜ್ಞಾನದ ಮೂಲಕ ಭಕ್ತರಿಗೆ ಮಾರ್ಗದರ್ಶನ ಮಾಡಿದ್ದಾರೆ. ಇಲ್ಲಿನ ಮಠವು ಭಕ್ತರನ್ನು ಪ್ರೀತಿಸುವ ಮಠವಾಗಿದೆ. ಕೃಷಿ ಕಾಯಕ ಮಾಡುವ ರೈತರು ತನು–ಮನ–ಭಾವ ಪರಿಶುದ್ಧವಾಗಿಟ್ಟುಕೊಂಡು ಜಗತ್ತಿನ ಜನರಿಗೆ ಆಹಾರ ಒದಗಿಸುತ್ತಿದ್ದಾರೆ. ಅವರನ್ನು ಗೌರವದಿಂದ ಕಾಣಬೇಕು ಎಂದು ಹೇಳಿದರು.

ವೀರಶೈವ ಲಿಂಗಾಯತ ಪಂಚಮಸಾಲಿ ಪೀಠದ ಡಾ.ಮಹಾದೇವ ಶಿವಾಚಾರ್ಯ ಸ್ವಾಮೀಜಿ, ಬಳಗಾನೂರದ ಮಂಜುಳಾತಾಯಿ, ಮುತ್ತಗಿಯ ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ, ನೇತೃತ್ವ ವಹಿಸಿದ್ದ ಅಭಿನವ ಸಂಗನಬಸವ ಶಿವಾಚಾರ್ಯ ಸ್ವಾಮೀಜಿ, ಅಧ್ಯಕ್ಷತೆ ವಹಿಸಿದ್ದ ಬೀಜ ಮತ್ತು ಸಾವಯವ ಪ್ರಮಾಣ ಸಂಸ್ಥೆಯ ಮಾಜಿ ಅಧ್ಯಕ್ಷ ವಿಜುಗೌಡ ಪಾಟೀಲ, ಸಹಕಾರ ಮಹಾಮಂಡಳ ನಿರ್ದೇಶಕ ಈರಣ್ಣ ಪಟ್ಟಣಶೆಟ್ಟಿ, ಲಿಂಬೆ ಅಭಿವೃದ್ಧಿ ಮಂಡಳಿ ನಿಗಮದ ಮಾಜಿ ಅಧ್ಯಕ್ಷ ಅಶೋಕ ಅಲ್ಲಾಪೂರ, ಸಾಹಿತಿ ಪ.ಗು.ಸಿದ್ದಾಪುರ ಮಾತನಾಡಿದರು.

ಮಾಜಿ ಸಚಿವರಾದ ಎಸ್. ಕೆ.ಬೆಳ್ಳುಬ್ಬಿ, ಅಪ್ಪಾಸಾಹೇಬಗೌಡ ಪಾಟೀಲ, ಮಾಜಿ ಶಾಸಕರಾದ ಸೋಮನಗೌಡ ಪಾಟೀಲ, ರಮೇಶ ಭೂಸನೂರ, ಬಿಜೆಪಿ ಜಿಲ್ಲಾ ಅಧ್ಯಕ್ಷ ಆರ್.ಎಸ್.ಕೂಚಬಾಳ, ಮುಖಂಡರಾದ ಉಮೇಶ ಕಾರಜೋಳ, ರವಿ ಖಾನಾಪೂರ, ರಘು ಕೌಟಿಲ್ಯ ಇದ್ದರು.

ವಿಡಿಸಿಸಿ ಬ್ಯಾಂಕ್ ನಿರ್ದೇಶಕ ಚಂದ್ರಶೇಖರಗೌಡ ಪಾಟೀಲ ಸ್ವಾಗತಿಸಿದರು. ಸಂಗಮೇಶ ಗೆಣ್ಣೂರ, ಕೆ.ಸುನಂದಾ ನಿರೂಪಿಸಿದರು.

# ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡದ ಸಿಎಂ :ಬಿಜೆಪಿ ಖಂಡನೆ

ಉದಯರಶ್ಮಿ ನ್ಯೂಸ್



ಮುದ್ದೇಬಿಹಾಳ: ಪಟ್ಟಣ–ಕ್ಕೆ ವಿವಿಧ ಕಾಮಗಾರಿಗಳ ಶಂಕು ಸ್ಥಾಪನೆ, ಅಡಿಗಲ್ಲು ಸಮಾರಂಭ ಹಾಗೂ ತಾಲೂಕಿನ ಕವಡಿಮಟ್ಟಿ ಗ್ರಾಮದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಮೂರ್ತಿ ಅನಾವರಣ ವೇಳೆ ಆಗಮಿಸಿದ್ದ ರಾಜ್ಯದ ಮುಖ್ಯಮಂತ್ರಿಗಳು ಪಟ್ಟಣದ ಅಂಬೇಡ್ಕರ್ ವೃತ್ತದ ಬಳಿಯೇ ಮೂರು ಬಾರಿ ತಿರುಗಾಡಿದರೂ ಸೌಜನ್ಯಕ್ಕೂ ಮಾಲಾರ್ಪಣೆ ಮಾಡದೇ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಅಪಮಾನ ಮಾಡಿದ್ದನ್ನು ತೀವ್ರವಾಗಿ ಖಂಡಿಸುವದಾಗಿ ಭಾಜಪಾ ಎಸ್.ಸಿ.ಮೋರ್ಚಾ ಸಾಮಾಜಿಕ ಜಾಲತಾಣದ ರಾಜ್ಯಾಧ್ಯಕ್ಷ ಮಂಜುನಾಥ ಚಲವಾದಿ ತಿಳಿಸಿದರು.

ಪಟ್ಟಣದ ವಿಜಯಪುರ ರಸ್ತೆಯಲ್ಲಿರುವ ಮಾಜಿ ಶಾಸಕ ಎ.ಎಸ್.ಪಾಟೀಲ ನಡಹಳ್ಳಿಯವರ ನಿವಾಸದಲ್ಲಿ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಅದೇ ರೀತಿ ಪಟ್ಟಣದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಕಾಮಗಾರಿ ಅಪೂರ್ಣಗೊಂಡಿದ್ದು ಅದನ್ನು ಪ್ರಶ್ನಿಸಲು ಮುಂದಾದ ನಮ್ಮ ಸಮಾಜದ ಮುಖಂಡರಾದ ಹರೀಶ ನಾಟೆಕಾರ ಮತ್ತು ಬಸವರಾಜ ಸಿದ್ದಾಪೂರ ಸೇರಿದಂತೆ ಇನ್ನೀತರರನ್ನು ಬಂಧಿಸಿ ಗುಪ್ತ ಸ್ಥಳದಲ್ಲಿಡುವ ಮೂಲಕ ದಲಿತರ ಹಕ್ಕುಗಳನ್ನು ಹತ್ತಿಕ್ಕಿದ ಶಾಸಕ ಸಿ.ಎಸ್.ನಾಡಗೌಡ್ರ ಧೋರಣೆಗೆ ವಿಷಾದ ವ್ಯಕ್ತಪಡಿಸಿದರು.

ಕಳೆದ ಚುನಾವಣೆಯಲ್ಲಿ ದಲಿತರ, ಹಿಂದುಳಿದವರ, ಅಲ್ಪಸಂಖ್ಯಾತರ ಪರವಾಗಿದ್ದೇವೆ ಎಂದು ಡೋಂಗಿ ಮಾತುಗಳನ್ನು ಹೇಳಿ ಮತಗಳನ್ನು ಪಡೆದು ಈಗ ದಲಿತರ ವಿರೋಧಿ ನಿಲುವುಗಳನ್ನು ವ್ಯಕ್ತಪಡಿಸಿದ್ದಾರೆ. ದಲಿತ ಹೋರಾಟಗಾರರು ಯಾರೂ ಅವರನ್ನ ಪ್ರಶ್ನಿಸಬಾರದು, ಬೆಳಕಿಗೆ ಬರಬಾರದು, ಬೆಳೆಯಬಾರದು, ತಾಲೂಕು ಜಿಲ್ಲಾ ಪಂಚಾಯತಿಗಳಲ್ಲಿ ಗೆಲ್ಲಬಾರದು ಅಂತಾ ನಿರಂತರವಾಗಿ ದಲಿತರನ್ನು ಶೋಷಣೆ ಮಾಡುತ್ತ ಬಂದಿದ್ದಾರೆ. ಹಿಂದೆ ಊಳುವವನೆ ಭೂ ಒಡೆಯ ಕಾಯ್ದೆ ಬಂದಾಗ ನಾಡಗೌಡ್ರ ಮನೆಯತನದ ಸುಮಾರು ಜಮೀನು ಸರ್ಕಾರಕ್ಕೆ ಹೋಗಿತ್ತು. ಆಗ ಸಾವಿರಾರು ದಲಿತ ಕುಟುಂಬಗಳಿಗೆ ಭೂಮಿ ಹಂಚಿಕೆಯಾದಾಗ ಇದೇ ನಾಡಗೌಡ್ರ ಕುಟುಂಬ ಎಲ್ಲ ಟ್ರಿಮಿನಲ್ ಫೈಲ್‌ಗಳನ್ನು ನಾಪತ್ತೆ ಮಾಡಿ ಎಷ್ಟೋ ಬಡವರ ಭೂಮಿಗಳನ್ನು ಮರಳಿ ಕಿತ್ತುಕೊಂಡು ದಲಿತ ವಿರೋಧಿ ಎಂಬ ಪಟ್ಟ ಕಟ್ಟಿಕೊಂಡಿದ್ದರು.


ಮೊನ್ನೆ ಮುಖ್ಯ ಮಂತ್ರಿಗಳಿಗೆ ಮನವಿ ಕೊಡಲು ಭಾಜಪಾ ದ ವೈದ್ಯಕೀಯ ಪ್ರಕೋಷ್ಠದ ಜಿಲ್ಲಾಧ್ಯಕ್ಷ ಡಾ.ಬಾಬುರಾಜೇಂದ್ರ ನಾಯಕ ಸೇರಿದಂತೆ ಮತ್ತೀತರನ್ನೂ ಕೂಡ ಬಂಧಿಸಿ ದಲಿತ ಕುಲ ತಾಲೂಕಿನಲ್ಲಿ ಉದ್ಧಾರವಾಗಬಾರದು, ಮುಖ್ಯವಾಹಿನಿಯಲ್ಲಿ ಬರಬಾರದು ಎಂಬ ಮನಸ್ಥಿತಿಯನ್ನು ಹೊಂದಿದ್ದಾರೆ. ಅಲ್ಲದೇ ಅವರ ಬೆಂಬಲಿಗರಾದ ಸಿದ್ದಣ್ಣ ಮೇಟಿ ಅವರು ಪತ್ರಿಕಾಗೋಷ್ಠಿ ನಡೆಸಿ ಮಾಜಿ ಶಾಸಕರಿಗೆ ಏಕವಚನದಲ್ಲಿ ಮಾತನಾಡಿದ್ದಾರೆ. ನಮಗೂ ಏಕವಚನ ಬಳಸಿ ಮಾತನಾಡಲು ಬರುತ್ತೆ, ಆದರೆ ನಮ್ಮ ಪಕ್ಷ ಅದನ್ನು ಕಲಿಸಿಲ್ಲ. ಒಟ್ಟಾರೆಯಾಗಿ ಮುಖ್ಯ ಮಂತ್ರಿಗಳು ಸುದ್ದಿಗೋಷ್ಠಿ ನಡೆಸಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರಿಗೆ ಆದ ಅಪಮಾನಕ್ಕೆ ಸಮಸ್ತ ನಾಡಿನ ಜನತೆಗೆ ಕ್ಷಮೆ ಯಾಚಿಸಬೇಕು. ಅದರಂತೆ ಸ್ಥಳೀಯ ಶಾಸಕರು ನಮ್ಮ ನಾಯಕರನ್ನು ಬಂಧಿಸಿದ್ದಕ್ಕಾಗಿ ಮತ್ತು ದಲಿತರ ಮೇಲೆ ಅನುಕಂಪ, ಪ್ರೀತಿ, ಗೌರವ ಇದೆ ಎಂದಾದ್ರೆ ದಲಿತ ನಾಯಕರಿಗೆ ಕ್ಷಮೆ ಯಾಚಿಸಬೇಕು ಇಲ್ದಿದ್ರೆ ಶಾಸಕರ ಪ್ರತಿಯೊಂದು ಕಾರ್ಯಕ್ರಮದಲ್ಲಿ, ಗಲ್ಲಿ ಗಲ್ಲಿ ಬಂದಾಗ, ಪ್ರತೀ ಹಳ್ಳಿಗೆ ಬಂದಾಗ ಕಪ್ಪು ಬಾವುಟ ಪ್ರದರ್ಶಿಸುತ್ತೇವೆ ಎಂದು ಎಚ್ಚರಿಸಿದರು.

ಈ ವೇಳೆ ಉಪಾಧ್ಯಕ್ಷರುಗಳಾದ ಶೇಕು ಆಲೂರ, ಮಹಾಂತೇಶ ತಮದಡ್ಡಿ, ಪ್ರಕಾಶ ಜಲಪೂರ ಇದ್ದರು.

# ಬುದ್ಧಿವಂತ ಕರು

ಉದಯರಶ್ಮಿ ನ್ಯೂಸ್





ವಿದ್ಯಾರ್ಥಿನಿಧಿ

– ಮಂಡ್ಯ.ಮ.ನಾ.ಉಡುಪ

ಅದೊಂದು ಕಾಲ. ಆಗ ಕಾಡಿನ ಪ್ರಾಣಿಗಳೆಲ್ಲಾ ಮನುಷ್ಯರಂತೆ ಮಾತಾಡ್ತಾಯಿದ್ವಂತೆ. ಕಾಡಂಚಿನಲ್ಲಿದ್ದ ಮನೆಯೊಂದರ ಕೊಟ್ಟಿಗೆಯಲ್ಲಿದ್ದ ಹಸುವಿನ ಚಿಕ್ಕ ಕರುವಿಗೆ ಅದಕ್ಕೆ ಆಗ ತಾನೆ ಮೂಡುತಿದ್ದ ಅದರ ಕೊಂಬಗಳನ್ನು ನೋಡಿದಾಗೆಲ್ಲ ಜಂಬ ಬರುತಿತ್ತು. ತಾನಾಗಲೇ ದೊಡ್ಡವನೆಂದು ಜಂಬದಿಂದ ಮೆರೆದಿತ್ತು.

ಅದೊಂದು ಮಳೆಗಾಲದ ಸಂಜೆ, ಹೊರಗಡೆಯಿಂದ ಹುಲ್ಲು ಮೇಯ್ದು ಎಲ್ಲಾ ಹಸುಗಳು ಕೊಟ್ಟಿಗೆಯಕಡೆ ಹೊರಟವು. ತಾಯಿ ಎಷ್ಟೇ ಕರೆದರೂ ಕರು ಕೇಳಿಸದಂತೆ ನಟಿಸಿತು. ಕೋಡುಮೂಡುತ್ತಿರುವ ಈ ಕರು. ಸ್ವಲ್ಪ ಹೊತ್ತಿನ ನಂತರ ತಲೆ ಎತ್ತಿ ನೋಡುತ್ತೆ, ಎಲ್ಲ ಹಸುಗಳು ಮನೆಗೆ ಹೊರಟುಹೋಗಿದ್ದವು. ತಾನೊಂದೇ ಹಿಂದೆ ಇರುವುದು ಅರಿವಾಯ್ತು. ಸೂರ್ಯ ಮುಳುಗು ಹೊತ್ತಾಗಿತ್ತು. ಹುಲಿಯ ಭಯದಿಂದ ಆ ಕರುವು ತರತರನೆ ನಡುಗಲಾರಂಭಿಸಿತು. ಭಯದಿಂದಲೇ ಅಂಬಾ ಅಂಬಾ ಕೂಗುತ್ತಾ ಮನೆಯದಾರಿ ಹಿಡಿಯಿತು. ಕಾಡ ದಾರಿಯ ಗಿಡಗಳ ಪೊದೆಯಿಂದ ಸಿಂಹವೊಂದು ದುತ್ತನೆ ಎದುರಿಗೆ ಬಂದು ನಿಂತಾಗ ಇದಕ್ಕೆ ತನ್ನ ಜೀವದ ಮೇಲಿನ ಆಸೆಯನ್ನು ಬಿಟ್ಟುಬಿಟ್ಟಿತು. ಆದರೂ ಸ್ವಲ್ಪ ಧೈರ್ಯ ಮಾಡಿ, ನಡುಕದ ದನಿಯಲ್ಲಿ,

“ ಸಿಂಹರಾಜ ನನ್ನನ್ನು ತಿನ್ನುವ ಮೊದಲು, ನಿನ್ನ ಕೊಳಲ ದನಿಗೆ ನೃತ್ಯ ಮಾಡಬೇಕೆಂಬದು ನನ್ನ ಕೊನೆ ಆಸೆ, ದಯವಿಟ್ಟು ನೆರವೇರಿಸಿಕೊಡು..”

ಎಂದಿತು. ಸಿಂಹಕ್ಕೂ ಕರುಣೆ ಮೂಡಿ

“ ಆಗಲಿ ನಿನ್ನ ಆಸೆಯನ್ನು ನೆರವೇರಿಸುತ್ತೇನೆ “

ಎಂದು ತನ್ನ ಕೊಳಲ ತೆಗೆದು ನಿಧಾನವಾಗಿ ಊದತೊಡಗಿತು.

ಮನೆಯ ದಾರಿ ಹಿಡಿದಿದ್ದ ಹಸುಗಳ ಗುಂಪು ತುಂಬಾ ಹೆಚ್ಚು ದೂರ ಹೋಗಿರಲಿಲ್ಲ, ಗುಂಪಿನ ಕಾವಲಿಗಿದ್ದ ನಾಯಿಗಳು ಸಿಂಹದ ಕೊಳಲ ನಾದವನ್ನು ಗುರುತು ಹಿಡಿದವು. ಸಿಂಹದ ಬಾಯಿಗೆ ಯಾವುದೋ ಹಸು ಸಿಲುಕಿದೆಯೆಂದು ಕೂಡಲೇ ಶಬ್ಧಬಂದ ಕಡೆ ನಾಯಿಗಳು ನುಗ್ಗಿದವು. ಇದ್ದಕ್ಕಿದ್ದಂತೆ ನಾಯಿಗಳ

# ಕಸಾಪ ತಾಲೂಕು ಸಮ್ಮೇಳನ ಮುಂದೂಡಿಕೆ

ಉದಯರಶ್ಮಿ ನ್ಯೂಸ್

ಸಿಂದಗಿ: ಪಟ್ಟಣದಲ್ಲಿ ಫೆ.05ರಂದು ನಡೆಯುಬೇಕಿದ್ದ ಸಿಂದಗಿ ತಾಲೂಕು 6ನೇ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಕೆಲವು ಕಾರಣಗಳಿಂದ ಮುಂದೂಡಲಾಗಿದೆ. ಮುಂದಿನ ದಿನಾಂಕವನ್ನು ಶೀಘ್ರವೇ ತಿಳಿಸಲಾಗುವುದು ಎಂದು ಕಸಾಪ ತಾಲೂಕಾಧ್ಯಕ್ಷ ಶಿವಾನಂದ ಬಡಾನೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫೆ.1–2 ರಂದು ಕೃಷಿ ತರಬೇತಿ ಕೇಂದ್ರದಲ್ಲಿ ರೈತರಿಗೆ ತರಬೇತಿ

ಉದಯರಶ್ಮಿ ನ್ಯೂಸ್

ವಿಜಯಪುರ: ಜಿಲ್ಲಾ ಕೃಷಿ ತರಬೇತಿ ಕೇಂದ್ರದ ವತಿಯಿಂದ ಜಿಲ್ಲೆಯ ಸಿಂದಗಿ ತಾಲೂಕಿನ ಆಲಮೇಲ ಮತ್ತು ಸಿಂದಗಿ ಹೋಬಳಿಯ ರೈತರಿಗೆ ಫೆ.6 ಹಾಗೂ 8 ರಂದು ಕ್ರಮವಾಗಿ ರೈತ ಸಂಪರ್ಕ ಕೇಂದ್ರ ಆಲಮೇಲ ಮತ್ತು ರೈತ ಸಂಪರ್ಕ ಕೇಂದ್ರ ಸಿಂದಗಿಯಲ್ಲಿ ಸೂಕ್ಷ □□ ನೀರಾವರಿ ಘಟಕಗಳು ಉಪಯೋಗಗಳು ಮತ್ತು ನಿರ್ವಹಣೆ ಕುರಿತು ತರಬೇತಿ ಆಯೋಜಿಸಲಾಗಿದೆ.

ಆಸಕ್ತ ರೈತರು ತರಬೇತಿಯಲ್ಲಿ ಭಾಗವಹಿಸಿ ಸಂಪೂರ್ಣ ಮಾಹಿತಿ ಪಡೆಯಬಹುದಾಗಿದ್ದು, ಈ ಕು–ರಿತಂತೆ ಹೆಚ್ಚಿನ ಮಾಹಿತಿಗಾಗಿ ಕೃಷಿ ಅಧಿಕಾರಿ ಶ್ರೀಮತಿ ಫಾತೀಮಾ ಬಾನು ಸುತಾರ್ ಮೊ: 9886134310 ಸಂಖ್ಯೆಗೆ ಸಂಪರ್ಕಿಸುವಂತೆ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವ್ಯಕ್ತಿತ್ವ ಹೆಚ್ಚಿಸುವ ಸ್ವಯಂ–ಶಿಸ್ತು :ಡಾ.ಅರವಿಂದ ಮನಗೂಳಿ

ಉದಯರಶ್ಮಿ ನ್ಯೂಸ್




ಸಿಂದಗಿ: ಬಾಲ್ಯದಲ್ಲಿ ಉತ್ತಮ ಸಂಸ್ಕಾರಗಳನ್ನು ನೀಡುವುದರ ಜೊತೆಗೆ ಶಿಕ್ಷಣದ ಮಹತ್ವವನ್ನು ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಸಂಸ್ಕಾರಗಳನ್ನು ನೀಡುವುದು ಮತ್ತು ಅವರನ್ನು ನೆಲೆಗೊಳಿಸುವುದು ಎಂದಿಗಿಂತಲೂ ಇಂದು ಮುಖ್ಯವಾಗಿದೆ ಎಂದು ಸಿ.ಎಮ್. ಮನಗೂಳಿ ಪದವಿ ಮಹಾವಿದ್ಯಾಲಯ ಪ್ರಾಧ್ಯಾಪಕ ಡಾ.ಅರವಿಂದ ಮ ಮನಗೂಳಿ ಅವರು ಹೇಳಿದರು.

ನಗರದ ಸರಕಾರಿ ಪದವಿ–ಪೂರ್ವ ಕಾಲೇಜ ಮಹಾವಿದ್ಯಾಲಯದ ಸಭಾಭವನದಲ್ಲಿ ಹಮ್ಮಿಕೊಂಡ ಬೀಳ್ಕೊಡುಗೆ, ವಾರ್ಷಿಕೋತ್ಸವ ಮತ್ತು ದಾನಿಗಳ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿ ಅವರು, ಸ್ವಯಂ–ಶಿಸ್ತು, ಉತ್ತಮ ಸಂಸ್ಕಾರ ವ್ಯಕ್ತಿತ್ವವನ್ನು ಹೆಚ್ಚಿಸುತ್ತವೆ. ವಿದ್ಯಾರ್ಥಿಗಳು ಉತ್ತಮ ಸಂಸ್ಕಾರಗಳನ್ನು ಜೀವನದಲ್ಲಿ ರೂಡಿಸಿಕೊಂಡು ಆದರ್ಶ ವಿದ್ಯಾರ್ಥಿಗಳಾಗಬೇಕು ಎಂದು ಹಾರೈಸಿದರು.

ಈ ವೇಳೆ ಆದಿಶೇಷ ಸಂಸ್ಥಾನ ಹಿರೇಮಠದ ರಾಜಯೋಗಿ ವಿರಾಜೇಂದ್ರ ಶಿವಯೋಗಿಗಳು ಸಾನಿಧ್ಯ ವಹಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಬಾಲ್ಯದಲ್ಲಿ ಅಳವಡಿಸಿಕೊಂಡ ಸಂಸ್ಕಾರ, ವಿದ್ಯ ಜೀವನದುದಕ್ಕೂ ಶ್ರೀಮಂತ ಪ್ರತಿ ಫಲವನ್ನು ನೀಡುತ್ತದೆ ಎಂದು ಆಶೀರ್ವಚನ ನೀಡಿದರು.

ಸಮಾರಂಭದಲ್ಲಿ ಮಾಜಿ ಪುರಸಭೆ ಸದಸ್ಯ ಹಾಗೂ ತಾಲೂಕು ಕಸಾಪ ನಿಕಟ ಪೂರ್ವ ಅಧ್ಯಕ್ಷ ರಾಜಶೇಖರ ಕೂಚಬಾಳ ಮಾತನಾಡಿ, ವಿದ್ಯಾರ್ಥಿಗಳಿಗೆ ಶಿಕ್ಷಣ ಮೂಲಕ ಉತ್ತಮ ಕೌಶಲ್ಯ, ಮಾನವೀಯ ಮೌಲ್ಯಗಳನ್ನು ಶಿಕ್ಷಕರು ಬೆಳೆಸಬೇಕೆಂದು ತಿಳಿಸಿದರು.

ಈ ವೇಳೆ ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ, ಪ್ರಾಚಾರ್ಯ ಎಸ್.ಆರ್.ಗಂಗನಳ್ಳಿ, ಸಿದ್ದರಾಮ ಚಿಂಚೋಳ್ಳಿ, ಡಾ.ಸುನೀಲ ಪಾಟೀಲ, ಗುರುರಾಜ ಹುರಕಡ್ಲಿ, ಬಸವರಾಜ ಅಗಸರ, ಎಂ.ಎಂ.ಯಾಳಗಿ, ಎಂ.ಆರ್ ಹೆಬ್ಬಳ್ಳಿ. ಎ.ಆರ್.ರಜಪೂತ, ಎಸ್. ಎಸ್.ಪಾಟೀಲ, ಜಿ.ಎನ್.ಹಿರೇಮಠ, ಜಿ.ಎಸ್.ಮೋರಟಗಿ, ಸೇರಿದಂತೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು. ಉಪನ್ಯಾಸಕ ಶಶಿಧರ ಅವಟಿ ಸ್ವಾಗತಿಸಿದರು. ಉಪನ್ಯಾಸಕ ಬಸನಗೌಡ ಬಿರಾದಾರ ನಿರೂಪಿಸಿದರು. ಉಪನ್ಯಾಸಕ ಎಸ್. ಎಸ್.ಸುರಪೂರ ವಂದಿಸಿದರು. ಅಂಬಿಕಾ ಗುಡ್ಯಾಳ ಪ್ರಾರ್ಥಿಸಿದರು.

# ಬಾಲಹನುಮಾನ ಜಾತ್ರೆಗೆ ಶಾಸಕ ರಾಜುಗೌಡ ಚಾಲನೆ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಕಳೆದ 10 ವರ್ಷಗಳಿಂದ ಪಟ್ಟಣದ ಬಾಲಹನುಮಾನ ಜಾತ್ರೆ ಮಾಲಾಧಾ–ರಿಗಳ ನೇತೃತ್ವದಲ್ಲಿ ವಿಜೃಂಭಣೆಯಿಂದ ಜರುಗುತ್ತಿರುವುದು ಅವರ ಭಕ್ತಿಭಾವಕ್ಕೆ ಸಾಕ್ಷಿಯಾಗಿದೆ ಎಂದು ಶಾಸಕ ರಾಜುಗೌಡ ಪಾಟೀಲ(ಕುದ–ರಿಸಾಲವಾಡಗಿ) ಹೇಳಿದರು

ಪಟ್ಟಣದ ಗಂಗಾನಗರದಲ್ಲಿ ಶನಿವಾರ ಬಾಲಹನುಮಾನ ದೇವಸ್ಥಾನದ 10ನೇ ವರ್ಷದ ಜಾತ್ರಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು. ನಮ್ಮ ಕಷ್ಟಕಾರ್ಪಣ್ಯಗಳನ್ನು ದೂರಮಾಡುವ ಮೂಲಕ ಹನುಮಾನ ಪ್ರತಿ ಗ್ರಾಮ, ಪಟ್ಟಣದಲ್ಲಿ ಪೂಜ್ಯನೀಯ ದೈವವಾಗಿದ್ದಾನೆ ಎಂದು ಹೇಳುತ್ತಾ, ಕ್ಷೇತ್ರದಲ್ಲಿ ಕೆರೆ, ಕಾಲುವೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಲಾಗಿದೆ. ಮುಂದಿನ ದಿನಗಳಲ್ಲಿ ಹನುಮನ ಆಶೀರ್ವಾದದಿಂದ ದೇಶದಲ್ಲಿ ಸಮೃದ್ಧತೆ ಕಾಣುವಂತಾಗಲಿ ಎಂದರು.

ಪಟ್ಟಣದ ಪ್ರಮುಖರಾದ ಬಿ.ಕೆ.ಪಾಟೀಲ ಮಾತನಾಡಿ, ರಾಮಾಯಣದಲ್ಲಿ ಮುಖ್ಯ ಪಾತ್ರ ವಹಿಸಿದ ಹನುಮಂತ ಈ ರಾಷ್ಟ್ರದ ಎಲ್ಲ ಜಾತಿ, ಮತ, ಸಮುದಾಯಗಳಿಂದ ಪೂಜಿಸ್ಪಡುವ ಏಕೈಕ ದೇವ ಎಂದರೆ ತಪ್ಪಾಗಲಾರದು ಎಂದರು.


ಧಾರವಾಡ ಶ್ರೀಗುರು ಚೈತನ್ಯ ಆಶ್ರಮದ ಸರ್ಪಭೂಷಣ ದೇವರು, ಪರದೇಶಿಮಠಶ್ರೀ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಜಾತ್ರಾ ಮಹೋತ್ಸವದ ಅಂಗವಾಗಿ ನಿಂಗು ಯಂಭತ್ನಾಳ ನೇತೃತ್ವದಲ್ಲಿ ಮಾಲಾಧಾರಿಗಳು ಬೆಳಿಗ್ಗೆ ಹೋಮ ಹವನಗಳು ಸೇರಿದಂತೆ ಪೂಜಾವಿಧಿ ವಿಧಾನಗಳನ್ನು ಶಾಸ್ತ್ರೋಕ್ತವಾಗಿ ನೆರವೇರಿಸಿ ನಂತರ ಮಹಾಪ್ರಸಾದ ವಿತರಿಸಿದರು.

ನಿವೃತ್ತ ನೌಕರರ ಸಂಘದ ತಾಲ್ಲೂಕು ಅಧ್ಯಕ್ಷ ಸಿ.ಕೆ.ಕುದರಿ, ವಿಜಯಪುರ ಅನುಗ್ರಹ ಆಸ್ಪತ್ರೆಯ ದತ್ತಾತ್ರೇಯ ಹೊಸಮಠ, ಸಮೃದ್ಧಿ ಸಹಕಾರ ಸಂಘದ ಉಪಾಧ್ಯಕ್ಷ ರಿಯಾಜ್ ಯಲಗಾರ, ಪಟ್ಟಣ ಪಂಚಾಯಿತಿ ಸದಸ್ಯರಾದ ರಮೇಶ ಮಸಬಿನಾಳ, ಕಾಸುಗೌಡ ಬಿರಾದಾರ(ಜಲಕತ್ತಿ), ಗುರುರಾಜ್ ಗಡೇದ, ಕಾಶೀನಾಥ ಬಜಂತ್ರಿ, ಮಂಗಳೇಶ ಕಡ್ಲೇವಾಡ್, ಉಮೇಶ ರೂಗಿ, ರಾಜು ಮೆಟಗಾರ, ಸಹಿತ ಶಂಕರಗೌಡ ಪಾಟೀಲ(ಯರನಾಳ), ವಿನೋದ ಪಾಟೀಲ, ಮುನ್ನಾ ಮಳಖೇಡ, ಮಕಬೂಲ್ ಬಾಗವಾನ, ಹಾಜೀಲಾಲ್ ಮಸಳಿ, ಸೋಮು ದೇವೂರ, ಪ್ರಕಾಶ ಮಲ್ಲಾರಿ, ವಿನೋದ ಚವ್ಹಾಣ, ಮಲ್ಲು ಜಮಾದಾರ, ಕಾಶೀನಾಥ ತಳಕೇರಿ, ಪ್ರಕಾಶ ಗುಡಿಮನಿ ಹಾಗೂ ಜಾತ್ರಾ ಕಮೀಟಿಯ ಸದಸ್ಯರು ಇದ್ದರು.

# ಮಕ್ಕಳ ಉನ್ನತಿಯಲ್ಲಿ ಸಾರ್ಥಕತೆ ಕಾಣಬೇಕು :ತಾವರಖೇಡ

ಉದಯರಶ್ಮಿ ನ್ಯೂಸ್



ದೇವರಹಿಪ್ಪರಗಿ: ಶಿಕ್ಷಕರಾಗಿ ರಾಷ್ಟ್ರಪತಿಯಾದ ಎಸ್.ರಾಧಾಕೃಷ್ಣನ್ ನಮ್ಮೆಲ್ಲರ ಹೆಮ್ಮೆ ಎಂದು ತಾಲ್ಲೂಕು ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್. ವಾಲೀಕಾರ ಹೇಳಿದರು.

ತಾಲ್ಲೂಕಿನ ಪಡಗಾನೂರ ಎಲ್.ಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸಹಶಿಕ್ಷಕ ವಾಯ್.ಜಿ. ತಾವರಖೇಡ ಸೇವಾನಿವೃತ್ತಿಯಾದ ಸಂದರ್ಭದಲ್ಲಿ ಸನ್ಮಾನಿಸಿ ಮಾತನಾಡಿದರು.

ಶಾಲಾ ಮುಖ್ಯಗುರು ಎಸ್.ಪಿ.ಇಂಗಳೇಶ್ವರ, ಎಸ್. ಎಮ್.ಹೊಕ್ಕುಂಡಿ, ಖಾದ್ರಿ, ಬಾಳು ರಾಠೋಡ, ವಿಜಯಲಕ್ಷ್ಮಿ ನವಲಿ, ನಾಗೇಶ ನಾಗೂರ, ಜಿ.ಪಿ.ಬಿರಾದಾರ ನಿವೃತ್ತ ಶಿಕ್ಷಕರ ಸೇವೆಯ ಕುರಿತು ಮಾತನಾಡಿದರು.

ಸನ್ಮಾನಿತ ತಾವರಖೇಡ ಶಿಕ್ಷಕರು ಮಾತನಾಡಿ, ವೃತ್ತಿಯಲ್ಲಿ ನನಗೆ ಸಂತೃಪ್ತಿಯಿದೆ. ಮಕ್ಕಳೊಂದಿಗೆ ಮಕ್ಕಳಾಗಿ ಬೆರೆತು ಕಾರ್ಯ ನಿರ್ವಹಿಸಿದರೆ ಉತ್ತಮ ಪ್ರಜೆಗಳನ್ನು ನಿರ್ಮಿಸಬಹುದು. ಮಕ್ಕಳ ಉನ್ನತಿಯಲ್ಲಿಯೇ ನಮ್ಮ ಸಾರ್ಥ–ಕ ಜೀವನ ಕಾಣಬೇಕು ಎಂದು ತಮ್ಮ ವೃತ್ತಿ ಜೀವನ ನೆನೆಸಿಕೊಂಡು ಭಾವುಕರಾದರು.

ಎಸ್‌ಡಿಎಮ್‌ಸಿ ಅಧ್ಯಕ್ಷ ಜಿ.ಎಚ್. ರಾಠೋಡ, ಗ್ರಾಮ ಪಂಚಾಯಿತಿ ಸದಸ್ಯ ರಾಜು ರಾಠೋಡ, ತಾರಾಸಿಂಗ್ ರಾಠೋಡ, ಗೀತಾ ರಾಠೋಡ, ಭೀಮರಾಯ ಪೋಲೇಶಿ, ದಾನು ರಾಠೋಡ, ಸಿ.ಆರ್.ನಾಯಿಕ್, ಎ.ಟಿ.ಲಮಾಣಿ, ಕವಿತಾ ಬ್ಯಾಳಿ, ಗಂಗಾಬಾಯಿ ಗುಡಿಮನಿ, ಅಮೃತಾ ಕರಾಬಿ, ಶೃತಿ ಪಾಟೀಲ, ಮಹಾದೇವಿ ಬಿರಾದಾರ, ಮಲ್ಲಿಕಾರ್ಜುನ ತಳಕೇರಿ, ಎಸ್.ಎಸ್.ತಳವಾರ ಸೇರಿದಂತೆ ಮಕ್ಕಳು, ಗ್ರಾಮಸ್ಥರು ಭಾಗವಹಿಸಿದ್ದರು.

# ಧರ್ಮಗ್ರಂಥಗಳಿಗಿಂತ ಸಂವಿಧಾನ ಶ್ರೇಷ್ಠ :ಪಾಟೀಲ

ಉದಯರಶ್ಮಿ ನ್ಯೂಸ್



ವಿಜಯಪುರ: ಹೋನಾಗನಹಳ್ಳಿ ಗ್ರಾಮದಿಂದ ಸಂವಿಧಾನ ಜಾಗೃತಿ ಜಾತಾ ರಥಕ್ಕೆ ಗ್ರಾಮ ಪಂಚಾಯತಿಯಿಂದ ಪುಂಡಲಿಕ ಮಾನವರ ಉಪ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ವಿಜಯಪುರ ಇವರು ರಥಕ್ಕೆ ಅದ್ದೂರಿ ಚಾಲನೆ ನೀಡಿದರು.

ಅಲ್ಲಿಂದ ಸಂವಿಧಾನ ರಥವು ತಿಕೋಟ ತಾಲೂಕು ಕೋಮಟೆ ಗ್ರಾಮ ಪಂಚಾಯಿತಿ ಹಲವು ಗ್ರಾಮಗಳ ಮೂಲಕ ಬಬಲೇಶ್ವರ ತಾಲೂಕಿಗೆ ಬಂದು ತಲುಪಿದಾಗ ಸಂವಿಧಾನ ಜಾಗೃತಿ ಜಾತಾರಥಕ್ಕೆ ವಿಶೇಷವಾಗಿ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಿ ಗೌರವ ಸಲ್ಲಿಸಿದರು,

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ವಿಜಯಪುರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎಸ್ ಎಂ ಪಾಟೀಲ ಮಾತನಾಡಿ, ಸಂವಿಧಾನವು ಜನತೆಯ ಹಕ್ಕುಗಳು ಮೂಲವಾಗಿದೆ. ವಿಶ್ವದ ದೀರ್ಘಸಂವಿಧಾನ ನಮ್ಮದು. ಹಾಗೂ ನಮ್ಮ ಸಂವಿಧಾನವು ಸೌಂದರ್ಯವೇ ಸಮಾನತೆ ಎಂದು ಹೇಳಿದರು

ಪ್ರತಿಯೊಬ್ಬರೂ ಸಂವಿಧಾನವನ್ನು ಓದಬೇಕು ಮಕ್ಕಳಿಗೆ ಓದಿ ಹೇಳಬೇಕು ಭಗವದ್ಗೀತೆ ಕುರಾನ್ ಬೈಬಲ್ ನಂತೆ ಸಂವಿಧಾನವು ಪ್ರತಿಯೊಬ್ಬರ ಮನೆಯಲ್ಲಿ ಅದರ ಪಠಣ ಮಾಡಬೇಕು ಎಂದು ಹೇಳಿದರು.

ಸಮಾರಂಭದ ಇನ್ನೋರ್ವ ಅತಿಥಿ ಸದಾನಂದ ಬಡಿಗೇರವರು ಮನೆ ಮನಗಳಲ್ಲಿಯೂ ಸಂವಿಧಾನದ ಜ್ಯೋತಿ ಬೆಳಗಬೇಕು. ಮಕ್ಕಳಿಂದ ಹಿಡಿದು ಹಿರಿಯರವರೆಗೂ ಸಂವಿಧಾನವನ್ನು ಓದಬೇಕು.ಅದು ನಮ್ಮ ನಿಮ್ಮೆಲ್ಲರಿಗೂ ಕರ್ತವ್ಯವಾಗಿದೆ ನಮ್ಮ ಜೀವನದ ಅವಿಭಾಜ್ಯ ವಿಚಾರಧಾರೆಗಳು ಸಂವಿಧಾನದಲ್ಲಿ ಅಡಕವಾಗಿವೆ ಅದನ್ನು ಅರಿತು ನಡೆದರೆ ನಮ್ಮ ದೇಶದ ಪ್ರಜಾಪ್ರಭುತ್ವವು ಗಟ್ಟಿಯಾಗಿ ಬೇರೂರುತ್ತದೆ ಎಂದರು.

ನಂತರ ಸಂವಿಧಾನ ಜಾಗೃತೆ ಜಾತ ರಥವು ಮುಖ್ಯರಸ್ತೆಯಲ್ಲಿ ಮೆರವಣಿಗೆ ಸಾಗಿತ್ತು. ವಾದ್ಯ ಮೇಳ ಡೊಳ್ಳು ಕುಣಿತ ಅದ್ದೂರಿ ಸಂಭ್ರಮದಿಂದ ಸಂವಿಧಾನ ಸ್ತಬ್ಧ ಚಿತ್ರವನ್ನು ಮೆರವಣಿಗೆ ಮಾಡಲಾಯಿತು. ಮೆರವಣಿಗೆ ಉದ್ದಕ್ಕೂ ಸಾಗಿದ ಯುವಕ ಯುವತಿಯರು ವಾದ್ಯ ಮೇಳದ ಸಂಗೀತಕೆ ಕುಣಿದು ಕುಪ್ಪಳಿಸಿದರು ಜಯ ಘೋಷ ಮುಳಗಿಸಿದರು

ಜಾಥ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ವಿವಿಧ ಇಲಾಖೆ ಅಧಿಕಾರಿ ಎ ಬಿ ಕಲಶೆಟ್ಟಿ, ಬಿ ವಿ ಚೆನ್ನಪ್ಪನವರ್, ಎನ್ ಹೆಚ್ ವಾಲಿಕಾರ, ಏ ಎಂ ಒ ಡಿಯರ್, ಎಸ್ ಎಸ್ ಕೆರೂರ, ಎ ಎಸ್ ಡಂಬಾಳ, ಪೂಜಾ ನಿಕಂ, ಸುಜಾತಾ ಟಕ್ಕಳಕಿ, ಇನಾಮ್ದಾರ್, ಪೂಜಾ ಮೇತ್ರಿ, ಪಾರ್ವತಿ ಮುಂತಾದವರು ಇದ್ದರು.

## ಡಾ.ಚೈತನಾ ಸಂಕೊಂಡ ರಚಿತ 'ಬಯಲು ಬೊಂಬೆ' ಕೃತಿ ಲೋಕಾರ್ಪಣೆ

# ಸಾಮಾಜಿಕ ಚಿಂತನೆ ಒಳಗೊಂಡ 'ಬಯಲು ಬೊಂಬೆ' ಕೃತಿ :ಪ್ರಾ.ಮಿರ್ಧೆ

ಉದಯರಶ್ಮಿ ನ್ಯೂಸ್



ವಿಜಯಪುರ: ಸಂಶೋಧನಾ ಲೇಖನಗಳ ಸಂಗ್ರಹಿತ 'ಬಯಲು ಬೊಂಬೆ' ಕೃತಿಯು ವಿಭಿನ್ನ ವಿಶೇಷ ಲೇಖನಗಳು, ಭಕ್ತಿ, ಸಾಮಾಜಿ–ಕ ಚಿಂತನ, ವೈವಿಧ್ಯತೆಯನ್ನು ಒಳಗೊಂಡಿದೆ ಎಂದು ಪ್ರಾಚಾರ್ಯ ಡಾ:ಆರ್.ಎಂ.ಮಿರ್ದೆ ಹೇಳಿದರು.

ನಗರದ ಬಿ ಎಲ್ ಡಿ ಇ ಸಂಸ್ಥೆಯ ವಚನ ಪಿತಾಮಹ ಡಾ.ಫ. ಗು.ಹಳಕಟ್ಟಿ ಸಂಶೋಧನಾ ಕೇಂದ್ರದಲ್ಲಿ ಗ್ರಂಥ ಲೋಕಾರ್ಪಣೆಗೊಳಿಸಿ ಮಾತನಾಡಿದರು.

ಸಾಹಿತ್ಯ ಲೋಕದಲ್ಲಿ ಸಂಶೋದನಾ ಬಹಳಷ್ಟು ವಿರಳ ಅಂತಹದರಲ್ಲಿ ಸಂಶೋಧನಾ ಕೈಗೊಂಡಿರುವ ಉಪನ್ಯಾಸಕಿ ಡಾ.ಚೈತನಾ ಸಂಕೊಂಡ ಇವರ ಕಾರ್ಯ ನಿಜಕ್ಕೂ ಶ್ಲಾಘನೀಯವಾದದ್ದು ಎಂದರು.

ಈ ಗ್ರಂಥವು ವಿಭಿನ್ನ ವಿಶೇಷತೆಗಳನ್ನು ಹೊಂದಿದೆ. ರಾಮಾಯಣ ಮಹಾಭಾರತ, ಜೈನ ಧರ್ಮದ ದಿಗ್ದರ್ಶನ ಬಸವಣ್ಣನವರ ವಿಚಾರ ಧಾರೆಗಳನ್ನು ಬಿತ್ತ–ರಿಸುವ ಕಾಯ ವಾಚನ ಬಿತ್ತರಿಸುವ ಪಂಚವಿಂಶತಿ ಲೀಲೆಗಳು, ಸಂತ ಶರಣರ ಸಾಹಿತ್ಯದಲ್ಲಿ ಸಾಮಾಜಿಕ ಚಿಂತನೆ, ಕನಕದಾಸರ ಕೀರ್ತನೆಗಳಲ್ಲಿ ಭಕ್ತಿ, ನಿಜಗುಣ ಶಿವಯೋಗಿಗಳ ಅನುಭಾವ ಇಂತಹ ಹಲವಾರು ಸಾಮಾಜಿಕ ಸದೃಡ, ಉತ್ತಮ ಸಮಾಜ ನಿರ್ಮಾಣ ಮಾಡುವಲ್ಲಿ ಒಟ್ಟು 13 ವಿಶೇಷ ಸಂಶೋಧನಾ ಲೇಖನಗಳ ವಿರಚಿತ ಈ ಗ್ರಂಥವು ಪ್ರಮುಖ ಸಾಹಿತ್ಯಾಸಕ್ತರಿಗೆ ಆಸಕ್ತಿಯುತವಾದ ಗ್ರಂಥವಾಗಿ ಹೊರಹೊಮ್ಮಿದೆ ಎಂದರು.

ಈ ವೇಳೆ ಬಬಲೇಶ್ವರ ಶಾಂತವೀರ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ವ್ಹಿ. ಆರ್ ಚೌಧರಿ ಗ್ರಂಥ ಪರಿಚಯಿಸಿ ಮಾತನಾಡಿ, ಚಿಕ್ಕ ವಯಸ್ಸಿನಲ್ಲಿನ ಈ ಸಾಧನೆ ಕಡಿಮೆ ಅವಧಿಯಲ್ಲೇ ಸಂಶೋಧನಾ ಕೈಗೊಂಡು ಮಹಾನ ಸಾಧನೆ ಮಾಡಿದ್ದಾರೆ. ಜೈನ್ ಧರ್ಮ, ವಚನಕಾರರ ಅವಲೋಕನ ಇವೆಲ್ಲದರ ವಿಶಿಷ್ಟವಾದ ಗ್ರಂಥವಾಗಿದೆ.

ಈ ಗ್ರಂಥದಲ್ಲಿ ಮರಾಠ ಅಭಂಗವನ್ನು ತೌಲನಿಕವಾಗಿ ತೆಗೆದುಕೊಂಡಿದ್ದಾರೆ.

ಬಯಲು ಎಂಬ ಪದವು ಅಧ್ಯಾತ್ಮಿಕ ದೃಷ್ಟಿಕೋನದಿಂದ, ಲಿಂಗಾಂಗ ಸಾಮರಸ್ಯವನ್ನು, ಬಯಲಿನ ಸ್ವರೂಪದಲ್ಲಿ ಶಿವನ ಸ್ವರೂಪದ ನಿಲುವು ಸೃಷ್ಟಿಯ ಅದಿ ಅಂತ್ಯ ಶಿವನೆ ಈ ರೀತಿಯಾಗಿ ಸಾಹಿತ್ಯ ಗ್ರಂಥ ಆಕಾರದ ರೂಪದಲ್ಲಿ

ನೀಡಿದ್ದಾರೆ. ಜೈನ್ ಧರ್ಮದ ವಿಚಾರ ಧಾರೆಗಳು, ಕಾವ್ಯಗಳು ,ಜನ್ಮ ಜನ್ಮಾಂತರ ನಂಬಿಕೆಗಳು ಹೊಂದಿರುವ ಜೈನ ಧರ್ಮದ ಬಗ್ಗೆ ವಿಶ್ಲೇಷಿಸಿದ್ದಾರೆ. ಸಾಹಿತ್ಯ ಲೋಕಕ್ಕೆ ಹಿರಿಮೆ ಗರಿಮೆ ಬರಲಿ ಎಂದು ಶುಭ ಹಾರೈಸಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ಹಸ್ತಪ್ರತಿ ಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಕೆ.ರವೀಂದ್ರ ನಾಥ ಮಾತನಾಡಿ, ಈ ಸಂದರ್ಭದಲ್ಲಿ ಲೇಖಕಿ ಉಪನ್ಯಾಸಕಿ ಡಾ.ಚೈತನಾ ಸಂಕೊಂಡ ಮಾತನಾಡಿ ಈ ಸಾಧನೆಯ ಹೆಜ್ಜೆಗೆ ನನ್ನ ಗುರುವೃಂದ, ಅಜ್ಜ ಅಜ್ಜಿಯವರೇ ಸ್ಪೂರ್ತಿ, ಅವರ ಮಹಾಭಾರತ, ರಾಮಾಯಣ ಸನ್ನಿವೇಶಗಳನ್ನು ಕಥೆಗಳ ರೂಪದಲ್ಲಿ ನಮಗೆ ಉಣಬಡಿಸುತ್ತಿದ್ದರು. ಅದುವೇ ನನಗೆ ಸ್ಪೂರ್ತಿಯಾಯಿತು. ಅಲ್ಲದೆ ಡಾ.ಫ.ಗು.ಹಳಕಟ್ಟಿ ಸಂಶೋಧನಾ ಕೇಂದ್ರದ ಸಿಬ್ಬಂದಿ ನನಗೆ ಬೆನ್ನೆಲುಬಾಗಿ ನಿಂತಿದ್ದಾರೆ. ಅವರ ಸಹಕಾರವೇ ಈ ಹೆಜ್ಜೆಗೆ ಸಾಕ್ಷಿಯಾಗಿದೆ ಎಂದು ಕೃತಜ್ಞತೆ ಸಲ್ಲಿಸಿದರು.

ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ.ಎಂ.ಎಸ್. ಮದಭಾವಿ ಮಾತನಾಡಿದರು.

ಈ ಸಂದರ್ಭದಲ್ಲಿ ಡಾ.ಫ.ಗು ಹಳಕಟ್ಟಿ ಸಂಶೋಧನಾ ಕೇಂದ್ರದ ಸಂಯೋಜನಾಧಿಕಾರಿ ಡಾ.ಡಾ.ವ್ಹಿ.ಡಿ ಐಹೊಳ್ಳಿ, ಡಾ.ಎಂ.ಎಸ್.ಮದಭಾವಿ, ಎಸ್ಬಿ.ಕಲಾ & ಕೆಸಿಪಿ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಆರ್.ಎಂ.ಮಿರ್ದೆ, ಉಪನ್ಯಾಸಕಿ, ಲೇಖಕರಾದ ಡಾ.ಚೈತನಾ ಸಂಕೊಂಡ, ಡಾ.ವ್ಹಿ.ಆರ್.ಚೌಧರಿ, ಸಾಹಿತಿ ಜಂಬುನಾಥ ಕಂಚ್ಯಾಣಿ, ಡಾ.ಶ್ರೀನಿವಾಸ ದೊಡ್ಡಮನಿ, ಉಪನ್ಯಾಸಕರು ಮತ್ತು ಸಂಶೋಧನಾರ್ಥಿಗಳು, ಉಪಸ್ಥಿತ–ರಿದ್ದರು.

ಪ್ರೊ.ಎಸ್.ಹೆಚ್ ಹೂಗಾರ ವಚನ ಗಾಯನ ಮಾಡಿದರು, ಪ್ರೊ.ಎ.ಬಿ ಬೂದಿಹಾಳ ವಂದಿಸಿದರು. ಪ್ರೊ.ಸುಭಾಶ್ಚಂದ್ರ ಕನ್ನೂರ ನಿರೂಪಿಸಿದರು.

# ಅಡ್ವಾಣಿಗೆ ಭಾರತ ರತ್ನ :ಡಾ.ಪ್ರಭುಸಾರಂಗದೇವ ಶ್ರೀ ಸ್ವಾಗತ

ಉದಯರಶ್ಮಿ ನ್ಯೂಸ್



ಸಿಂದಗಿ: ಎಲ್. ಕೆ.ಅಡ್ವಾಣಿ ಅವರಿಗೆ ಭಾರತ ರತ್ನ ನೀಡುತ್ತಿರುವುದು ತುಂಬಾ ಸಂತೋಷದ ಸಂಗತಿ. ಅವರೊಬ್ಬ ಅಪ್ಪಟ ದೇಶಭಕ್ತ ನಿಷ್ಠಾವಂತ ಹಿಂದು ಕಾರ್ಯಕರ್ತರು ಆಗಿದ್ದರು ಯೋಗ್ಯ ವ್ಯಕ್ತಿಗೆ ಯೋಗ್ಯ ಗೌರವ ಸಂದಿದ್ದು ಅತ್ಯಂತ ಹೆಮ್ಮೆಯ ಸಂಗತಿ ಎಂದು ಪಟ್ಟಣದ ಸಾರಂಗಮಠದ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಸ್ವಾಗತಿಸಿದ್ದಾರೆ.

# ಶಿವಕುಮಾರ್ ಹಿರೇಮಠ ರಿಗೆ ಗೌರವ ಡಾಕ್ಟರೇಟ್



ಉದಯರಶ್ಮಿ ನ್ಯೂಸ್

ಇಂಡಿ: ತಾಲ್ಲೂಕಿನ ಆಳೂರ ಗ್ರಾಮದ ಶಿವಕುಮಾರ್ ಗಂಗಯ್ಯ ಹಿರೇಮಠ ಅವರಿಗೆ ಗೌರವ ಡಾಕ್ಟರೇಟ್ ಪ್ರಶಸ್ತಿ ಲಭಿಸಿದ್ದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರು ಇತ್ತೀಚೆಗೆ ಹುಬ್ಬಳ್ಳಿಯಲ್ಲಿ ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಿದರು.

ಏಷ್ಯಾ ಇಂಟರ್ನ್ಯಾಷನಲ್ ಟೀಚರ್ ರಿಸರ್ಚ್ ಯೂನಿವರ್ಸಿಟಿಯಲ್ಲಿ ವೇದಗಾಮ ಮತ್ತು ಜ್ಯೋತಿಷ್ಯ ಶಾಸ್ತ್ರದಲ್ಲಿ ವಿಶೇಷ ಸಾಧನೆಗೈದಿದ್ದ ಅವರನ್ನು ನವನಗರ ಹುಬ್ಬಳ್ಳಿಯಲ್ಲಿರುವ ಕಾಶಿ ಜಗದ್ಗುರುಗಳ ಶಾಖಾ ಪೀಠವಾದ ಜಂಗಮವಾಡಿ ಶ್ರೀಮಠದ ಆವರಣದಲ್ಲಿ ಗೌರವ ಡಾಕ್ಟರೇಟ್ ಪ್ರಧಾನ ಮಾಡಲಾಯಿತು.

ಹಿರಿಯ ಸಾಹಿತಿ, ಸಂಗೀತಗಾರ ಡಾ. ರಾಜಗುರು ಕಲಕೇರಿ, ಡಾ. ವಿರೂಪಾಕ್ಷ ದೇವರು, ಜಂಗಮವಾಡಿ ಮಠದ ಡಾ. ರಾಜೇಂದ್ರ ಶಿವಾಚಾರ್ಯರು ಉಪಸ್ಥಿತರಿದ್ದರು.

# ಹೂವಿನ ವ್ಯಾಪಾರಿ ಮೇಲೆ ಮಾರಣಾಂತಿಕ ಹಲ್ಲೆ

ಉದಯರಶ್ಮಿ ನ್ಯೂಸ್



ವಿಜಯಪುರ: ಕ್ಷುಲ್ಲಕ ಕಾರಣಕ್ಕೆ ಓರ್ವನ ಮೇಲೆ ದುಷ್ಕರ್ಮಿಗಳು ಹಲ್ಲೆಗೈದಿರುವ ಘಟನೆ ವಿಜಯಪುರ ನಗರದ ಕೋರ್ಟ್ ಸರ್ಕಲ್‌ನಲ್ಲಿ ಸೋಮವಾರ ನಡೆದಿದೆ

ತಲ್ವಾರ್‌ನಿಂದ ಫಿರೋಜ್ ಮುಲ್ಲಾ (32) ಮೇಲೆ ಹಲ್ಲೆಗೈದು ದುಷ್ಕರ್ಮಿಗಳು ಎಸ್ಕೆಪ್ ಆಗಿದ್ದಾರೆ.

ಫಿರೋಜ್ ಮುಲ್ಲಾ ಹೂವಿನ ವ್ಯಾಪಾರ ಮಾಡುತ್ತಿದ್ದನು

ಸ್ಥಳಕ್ಕೆ ಜಲನಗರ ಪೊಲೀಸರ ಭೇಟಿ ಪರಿಶೀಲನೆ ನಡೆಸಿದ್ದಾರೆ. ಜಲನಗರ ಪೊಲೀಸ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

### ಮಾತೃಹೃದಯಿ ಡಿ.ಎನ್.ಅಕ್ಕಿ ದುಡಿಮೆಗೆ ದಕ್ಕಿದ ಗೌರವ । ಫೆ.26ಕ್ಕೆ ಶಹಾಪುರ ತಾಲೂಕು 4ನೇ ಕನ್ನಡ ಸಾಹಿತ್ಯ ಸಮ್ಮೇಳನ

# ಸರ್ವಾಧ್ಯಕ್ಷ ಸ್ಥಾನಕ್ಕೆ ಸಂಶೋಧಕ-ಸಾಹಿತಿ ಡಿ.ಎನ್. ಅಕ್ಕಿ ಆಯ್ಕೆ

**ಉದಯರಶ್ಮಿ ನ್ಯೂಸ್**

**– ಡಾ.ಸಂತೋಷ ನವಲಗುಂದ**
**ಪತ್ರಕರ್ತ-ಲೇಖಕ**



ನಾಡಿನ ಸಂಶೋಧಕ-ಸಾಹಿತಿಗಳಲ್ಲಿ ಡಿ.ಎನ್.ಅಕ್ಕಿಯವರು ಮಹತ್ವದ ಸಂಶೋಧಕರಲ್ಲೊಬ್ಬರು. ಕಲ್ಯಾಣ ಕರ್ನಾಟಕದ ಈಗಿನ ಯಾದಗಿರಿ ಜಿಲ್ಲೆಯ ಶಹಾಪುರ ತಾಲೂಕಿನ ಗೋಗಿ ಇವರ ಹುಟ್ಟೂರು. ಗ್ರಾಮದ ಪ್ರತಿಷ್ಠಿತ ವ್ಯಾಪಾರಸ್ಥ ಅಕ್ಕಿ ಮನೆತನದ ನಾಭಿರಾಜ ಮತ್ತು ಶ್ರೀಕಾಂತಮ್ಮ ದಂಪತಿಗಳ ಮಗನಾಗಿ 3ನೇ ಅಕ್ಟೋಬರ್ 1948ರಲ್ಲಿ ಜನಿಸಿದರು. ಬಾಲ್ಯ ಕಳೆದು ಪ್ರೌಢಾವಸ್ಥೆ



– ಡಾ.ಸಂತೋಷ ನವಲಗುಂದ
ಪತ್ರಕರ್ತ-ಲೇಖಕ

ತಲುಪುತ್ತಿದ್ದಂತೆ ಅನೇಕ ತೆರನಾದ ಕಷ್ಟಗಳನ್ನು ಎದುರಿಸುತ್ತಲೇ ಪ್ರೌಢ ಶಿಕ್ಷಣ ಮುಗಿಸಿಕೊಂಡರು. ನಂತರ ಗದಗದಲ್ಲಿ ಚಿತ್ರಕಲಾ ತರಬೇತಿಗೆಂದು ಹೋಗಿ ಅವರು ಅಲ್ಲಿ ಅನುಭವಿಸಿದ ಸಂಕಷ್ಟಗಳು ಅನೇಕ. ಆದರೆ ಗದಗದಲ್ಲಿ ಗೆಳೆಯರಾದ ಕಂಬಳಿಮಠ, ಗಾಣಿಗೇರ ಇನ್ನೂ ಅನೇಕ ಗೆಳೆಯರ ಸಹಾಯ-ಸಹಕಾರದಿಂದ ಯಶಸ್ವಿ ಚಿತ್ರಕಲಾ ತರಬೇತಿ ಶಿಕ್ಷಣ ಪಡೆದು, ಚಿತ್ರಕಲಾ ಶಿಕ್ಷಕರಾಗಿ ಸೇವೆ ಪ್ರಾರಂಭಿಸುತ್ತಾರೆ. ಅಷ್ಟೊತ್ತಿಗಾಗಲೇ ಮನೆಯಲ್ಲಿ ಸಾಲು ಸವಾಲುಗಳು ಅಕ್ಕಿಯವರ ಮುಂದೆ ನಿಂತಿದ್ದವು. ಅವೆಲ್ಲದಕ್ಕೂ ಸಮಾಧಾನಚಿತ್ತದಿಂದ ಪರಿಹಾರ ಕಂಡುಕೊಂಡು ಸಂಸಾರದ ನೊಗವ ಹೊತ್ತು, ಮನೆತನ ವಾದ-ರಿಯಾಗಿ ಮುನ್ನಡೆಸಿದರು. ಇಷ್ಟೆಲ್ಲಾ ತೊಂದರೆಗಳನ್ನು ಸಮರ್ಥವಾಗಿ ಎದುರಿಸಿ ವಿದ್ಯಾರ್ಥಿಗಳ ಪಾಲಿಗೆ ಆದರ್ಶ ಶಿಕ್ಷಕರು. ಅಷ್ಟೇ ಅಲ್ಲದೇ, ಕಟ್ಟುನಿಟ್ಟಿನ ಶಿಸ್ತಿನ ಶಿಪಾಯಿಯಾಗಿ ಸಾವಿರಾರು ವಿದ್ಯಾರ್ಥಿಗಳ ಬಾಳಿಗೆ ಬೆಳಕು ತೋರಿದರು.

**ಶಿಕ್ಷಕ ವೃತ್ತಿಯಿಂದ ಸಾಹಿತ್ಯ ಮತ್ತು ಸಂಶೋಧನಾ ಕೃಷಿ:**

ಸರ್ಕಾರಿ ಶಾಲೆಯಲ್ಲಿ ಚಿತ್ರಕಲಾ ಶಿಕ್ಷಕರಾಗಿ ಮಕ್ಕಳಿಗೆ ಒಂದೆರೆಡು ಚಿತ್ರಗಳನ್ನು ಕಲಿಸಿ ಸುಮ್ಮನೆ ಕುಳಿತಿ-ರಬೇಕಾಗಿತ್ತು. ಆದರೆ, ಡಿ.ಎನ್. ಅಕ್ಕಿ ಅವರು ಹಾಗೆ ಮಾಡಲಿಲ್ಲ. ಚಿತ್ರಕಲೆಯ ಜತೆಗೆ ಹಿಂದಿ, ನೈತಿಕ ಶಿಕ್ಷಣ ವಿಷಯಗಳ ಬೋಧನೆಯಲ್ಲಿ ತೊಡಗುವುದರ ಮೂಲಕ ವಿದ್ಯಾರ್ಥಿಗಳಲ್ಲಿ ವಿನಯ-ವಿಧೇಯತೆ, ಉದಾತ್ತ ಮೌಲ್ಯಗಳನ್ನು ಬಿತ್ತಿ ಸುಸಂಸಕೃತರನ್ನಾಗಿಸುವಲ್ಲಿ ಅಕ್ಕಿ ಅವರು ಗೈದ ಸೇವೆ ಅನುಪಮವಾದದ್ದು. ಶಿಕ್ಷಕ ವೃತ್ತಿಯ ಜತೆಗೆ ಇತಿಹಾಸ ಅಧ್ಯಯನದ ವಿದ್ಯಾರ್ಥಿಯಾಗಿ ಮುಂದೊಂದು ದಿನ ತಮ್ಮ ಸತತ ಅಧ್ಯಯನ, ಪರಿಶ್ರಮ, ಕ್ಷೇತ್ರಕಾರ್ಯಗಳ ಮೂಲಕ ಇತಿಹಾಸ ಸಂಶೋಧಕರಾಗಿ ನಾಡಿನ ಸಹೃದಯರ ನೆಚ್ಚಿನ ವಿದ್ವಾಂಸರೆನಿಸಿಕೊಂಡರು. ಚದುರಿ ಹೋದ, ವಿನಾಶದ ಅಂಚಿನಲ್ಲಿರುವ ಇತಿಹಾಸದ ಕುರುಹುಗಳನ್ನು ಹೆಕ್ಕಿ ತೆಗೆದು ಅವುಗಳನ್ನು ನಾಡಿಗೆ ಪರಿಚಯಿಸಿದರು. ಆ ಮೂಲಕ ರಾಷ್ಟ್ರೀಯ ಸಂಪತ್ತಿನ ರಕ್ಷಣೆಗಾಗಿ ತಮ್ಮನ್ನು ತಾವು ಸಮರ್ಪಿಸಿಕೊಂಡರು. ಇವತ್ತು ಯುವ ಸಂಶೋಧಕರಿಗೆ ಮಾದರಿಯಾಗಿ ಮಾರ್ಗದರ್ಶನ ಗೈಯುತ್ತಿರುವುದು ನಮ್ಮ ಭಾಗ್ಯವೇ ಸರಿ.

**ಹಡದವ್ವಳ ತವರು ಮಳ್ಳಿ ಪರಿಸರ ಪ್ರೇರಣೆ:**


ಡಿ.ಎನ್.ಅಕ್ಕಿಯವರ ಪ್ರಾಥಮಿಕ ಶಿಕ್ಷಣ ಕೆಲ ವರ್ಷ ತಾಯಿ ತವರುಮನೆ ಮಳ್ಳಿ ಗ್ರಾಮದಲ್ಲಿ ನಡೆಯುತ್ತದೆ. ಮಳ್ಳಿ ಈ ಮೊದಲಿನಿಂದಲೂ ಐತಿಹಾಸಿಕ, ಸಾಂಸ್ಕೃತಿಕ ಹಿರಿಮೆ ಗರಿಮೆ ಹೊಂದಿದ ಊರು. ಹೊಂಬಣ್ಣ ಕಿರಣಗಿ ಅಕ್ಕಿಯವರ ತಾತ. ತಾತ (ಅಜ್ಜ) ಗ್ರಾಮದ ಗಣ್ಯ ವ್ಯಾಪಾರಸ್ಥ. ಅಕ್ಕಿಯವರ ಸೋದರಮಾವ ಮೋಹನಚಂದ ಕಿರಣಗಿ ನಾಡಿನ ಖ್ಯಾತ ನಾಟಕಕಾರರು. ಕಿರಣಗಿ ಅವರ ಬರಹವೂ ಅಕ್ಕಿಯವರ ಮೇಲೆ ದಟ್ಟ ಪ್ರಭಾವ ಬೀರಿತು. ಹೆಚ್ಚಾಗಿ ಮಳ್ಳಿ ಕಲಾವಂತಿಕೆಗೆ ಹೆಸರು ಪಡೆದ ಗ್ರಾಮ. ಇಂತಹ ಪರಿಸರವೂ ಅಕ್ಕಿಯವರ ಕವಿ ಹೃದಯ ಮೊಗ್ಗಾಗಿ ಅರಳಿ ಸಾಹಿತ್ಯ ಸುಗಂಧ ಬೀರಲು ಹೆಚ್ಚು ಪ್ರೇರಣೆ ನೀಡಿತೆನ್ನಬಹುದು. ಗ್ರಾಮದಲ್ಲಿನ ಸಹಪಾಠಿಗಳಾದ ಶರಣಗೌಡ ಪೊಲೀಸ್ ಪಾಟೀಲ, ಶರಣ ನವಲಗುಂದ, ಗೊಲ್ಲಾಳಪ್ಪಗೌಡ ಪೊಲೀಸ್‌ಪಾಟೀಲ, ನಾಗವ್ವಗೌಡತಿ ನವಲಗುಂದ, ಕಾಂತವ್ವ ಚಿನ್ನದಕಂತಿಮಠ, ಅನೇಕ ಗೆಳೆಯರ ಬಳಗ ಇವತ್ತಿಗೂ ಅಕ್ಕಿಯವರನ್ನು ಸ್ಮರಿಸುತ್ತಾರೆ. ಊರಿನ ಹಳ್ಳದ ದಂಡೆಯಲ್ಲಿ ಯಾವ ಜಾತಿ, ಧರ್ಮಗಳ ಭೇದವೆನ್ನದೇ ಎಲ್ಲರೂ ಸೇರಿ ಸಸಿ ಹಾಕಿ ಆಡಿದ ಆಟ, ಕೂಡಿ ಉಂಡ ಊಟ ಅಕ್ಕಿಯವರು ಇವತ್ತಿಗೂ ನೆನೆದು ಸಂತಸದ ಮಾತುಗಳನ್ನಾಡುತ್ತಾರೆ. ಇಂತದ್ದೊಂದು ಸಾಂಸ್ಕೃತಿಕ ಪರಿಸರ ಅಕ್ಕಿಯವರ ಮೊದಲ ಬರವಣಿಗೆಗೆ ಪೇರಣಾದಾಯಕವಾಗಿದೆ ಎಂದರೆ ಅಚ್ಚರಿಯೇನಲ್ಲ.

**ಅಭಿಮಾನಿಗಳ ಅಭಿಮಾನದ ಅಭಿನಂದನೆ:**

ಯಡ್ರಾಮಿ ವಿರಕ್ತಮಠದ ಪೂಜ್ಯ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಅಭಿನಂದನೆ ತಿಳಿಸಿ ಆಶೀರ್ವದಿಸಿದ್ದಾರೆ. ಸಗರಾದ್ರಿ ಸಾಂಸ್ಕೃತಿಕ ಸಂಗಮ ವೇದಿಕೆ, ಸಾಹಿತಿ ವೀರಣ್ಣ ಕಲಕೇರಿ, ಪ್ರಶಾಂತ ಕುನ್ನೂರ, ನಿಂಗನಗೌಡ ದೇಸಾಯಿ, ಡಾ.ವೆಂಕನಗೌಡ ಪಾಟೀಲ, ವೀರಭದ್ರಪ್ಪ ಪತ್ತಾರ, ಸಿದ್ರಾಮಪ್ಪ ನವಲಗುಂದ, ದೇವು ಮಡಿವಾಳರ, ಮಲ್ಲಿಕಾರ್ಜುನ ಯಾದಗಿರಿ, ಕಿಶೋರಕುಮಾರ ಕಾಸರ, ಪ್ರಕಾಶ ಸಾಹು ಬೆಲ್ಲದ ಸೇರಿದಂತೆ ಇತರರು ಅಭಿನಂದನೆ ತಿಳಿಸಿದ್ದಾರೆ.

ಡಿ.ಎನ್.ಅಕ್ಕಿಯವರ ಸಮಗ್ರ ಜೀವನ ಸಾಧನೆ ಕುರಿತಾಗಿ ಪಿಎಚ್.ಡಿ, ಎಂ.ಫಿಲ್ ಪ್ರಬಂಧಗಳು ಮಂಡನೆಯಾಗಿದ್ದು ಈ ಮುಖೇನ ಅವರ ಜೀವನಾದರ್ಶ ತೆರೆದ ಕನ್ನಡಿಯಂತೆ ಕಾಣಬಹುದಾಗಿದೆ. 76ರ ಇಳಿ ವಯಸ್ಸಿನಲ್ಲಿಯೂ ಅಕ್ಕಿಯವರ ಸಾಹಿತ್ಯಿಕ ಬರವಣಿಗೆ, ಸಂಶೋಧನಾತ್ಮಕ ಕುತೂಹಲ ಎಂಥ-ವರನ್ನು ಬೆರಗುಗೊಳಿಸುವಂತದ್ದು. ಇದೇ ಫೆಬ್ರುವರಿ 26ಕ್ಕೆ ಶಹಾಪೂರದ ಭೀಮರಾಯನಗುಡಿಯಲ್ಲಿ ನಡೆವ ನಾಲ್ಕನೇ ಕನ್ನಡ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರನ್ನಾಗಿ ಸರ್ವಾನುಮತದಿಂದ ಆಯ್ಕೆ ಮಾಡಿದ್ದು ಅಕ್ಕಿಯವರ ಅಭಿಮಾನಿ ಬಳಗಕ್ಕೂ, ಸಾಹಿತ್ಯಾಸಕ್ತರಿಗೂ ಸಂತಸ ತಂದಿದೆ ಎನ್ನುವುದು ನಿರ್ವಿವಾದದ ಸಂಗತಿ. ಅಕ್ಕಿಯವರ ದುಡಿಮೆಗೆ ದಕ್ಕಿದ ಗೌರವವಿದು. ಸಮ್ಮೇಳನದ ಸರ್ವಾಧ್ಯಕ್ಷ ಗೌರವ ನೀಡುವುದರಿಂದ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ತನ್ನ ಘನತೆಯನ್ನು ಇಮ್ಮಡಿಗೊಳಿಸಿಕೊಂಡಿದೆ ಎನ್ನುವುದರಲ್ಲಿ ಯಾವ ಅನುಮಾನಗಳಿಲ್ಲ. ಸಗರನಾಡಿನ ಕೇಂದ್ರಸ್ಥಾನ ಶಹಾಪುರದಲ್ಲಿ ಕನ್ನಡ ನುಡಿ ಜಾತ್ರೆಯ ಸಂಭ್ರಮವನ್ನು ನಾವೆಲ್ಲರೂ ಸೇರಿ ಅನುಭವಿಸಿ, ನುಡಿದೇವಿಯ ಕೃಪೆಗೆ ಪಾತ್ರರಾಗೋಣವೇ!

## ಅಕ್ಕಿಯವರ ಕೃತಿಗಳು-ಪ್ರಶಸ್ತಿಗಳು



**ಅಕ್ಕಿಯವರ ಕೃತಿಗಳು:** ಡಿ.ಎನ್. ಅಕ್ಕಿಯವರ ಕೃತಿಗಳು ಮುಂಬೆಳಗು, ಚಿಗುರು ಚಿಂತನ, ಸಗರನಾಡ ಸಿರಿ, ಶಹಾಪುರ ತಾಲೂಕು ದರ್ಶನ, ಹಡೆದವ್ವ ಹಾಡ್ಯಾಳ, ಸನ್ನತಿ ಚಂದ್ರಲಾಂಬಾ, ಮಾಯೆ ಮದ್ದಲೆ, ಜಿನದನಿ, ಹಕ್ಕಲುತೆನೆ, ಯಕ್ಷಪ್ರಶ್ನೆ, ಬಾನರಂಗ, ಜೈನ ವಿಗ್ರಹಗಳು, ವರ್ಧಮಾನ ಮಹಾವೀರ ಹಾಗೂ ಶಿಕ್ಷಕನ ಮನದಾಳದಿಂದ ಸೇ-ರಿದಂತೆ 28ಕ್ಕೂ ಹೆಚ್ಚು ಕೃತಿಗಳು, ಸಂಶೋಧನಾ ಲೇಖನಗಳು ರಾಜ್ಯ ಮತ್ತು ರಾಷ್ಟ್ರಮಟ್ಟದ ಪತ್ರಿಕೆಗಳಲ್ಲಿ ಪ್ರಕಟಗೊಂಡಿವೆ.

**ಪ್ರಶಸ್ತಿಗಳು**

ಐದು ದಶಕಗಳ ಕಾಲ ಡಿ.ಎನ್.ಅಕ್ಕಿಯವರು ನಿಸ್ಪೃಹವಾಗಿ, ನಿರ್ಮಲ ಹಾಗೂ ನಿಷ್ಪಕ್ಷ ಮನಸ್ಸಿನಿಂದ ಗೈದ ಸಾಹಿತ್ಯಿಕ ಮತ್ತು ಸಂಶೋಧನೆ ಕರ್‍ಯವನ್ನು ಗುರುತಿಸಿ ನಾಡಿನ ಅನೇಕ ಮಠ-ಮಾನ್ಯಗಳು ರಾಜ್ಯ ಮತ್ತು ರಾಷ್ಟ್ರ ಮಟ್ಟದ ಗೌರವಾದರಗಳು ಮುಡಿಗೇರಿವೆ. 1996ರಲ್ಲಿ ರಾಜ್ಯ ಸರ್ಕಾರದಿಂದ ಆದರ್ಶ ಶಿಕ್ಷಕ ಪ್ರಶಸ್ತಿ, 1997-98ರಲ್ಲಿ ಆದರ್ಶ ರಾಷ್ಟ್ರ ಶಿಕ್ಷಕ ಪ್ರಶಸ್ತಿ, ಡಿ.ಎಸ್.ಮ್ಯಾಕ್ಸ್, ಕಾಯಕ ಸಮ್ಮಾನ್ ಪ್ರಶಸ್ತಿ ಸೇರಿದಂತೆ ನೂರಾರು ಪ್ರಶಸ್ತಿ, ಮಾನ ಸಮ್ಮಾನಗಳು ಅವರ ಪಾಲಿಗೆ ದಕ್ಕಿವೆ.

### ಜಿಲ್ಲೆಯ ನಿರುದ್ಯೋಗಿಗಳು ನೊಂದಾಯಿಸಿಕೊಳ್ಳಲು ಕ್ರಮ ವಹಿಸಿ :ಡಿಸಿ ಟಿ.ಭೂಬಾಲನ್

# ಫೆ.26-27 ರಂದು ಬೆಂಗಳೂರಿನಲ್ಲಿ ಬೃಹತ್ ಉದ್ಯೋಗ ಮೇಳ

**ಉದಯರಶ್ಮಿ ನ್ಯೂಸ್**



ವಿಜಯಪುರ: ಬೆಂಗಳೂರಿನ ಅರಮನೆ ಮೈದಾನದಲ್ಲಿ ಫೆ.26 ಹಾಗೂ 27 ರಂದು ರಾಜ್ಯ ಮಟ್ಟದ ಯುವ ಬೃಹತ್ ಉದ್ಯೋಗ ಮೇಳ-2024 ಅಯೋಜಿಸಲಾಗಿದ್ದು, ಈ ಉದ್ಯೋಗ ಮೇಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ನಿರುದ್ಯೋಗಿಗಳು ಭಾಗವಹಿಸಲು ನೋಂದಣಿಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಸೂಚನೆ ನೀಡಿದರು.

ಜಿಲ್ಲಾ ಕೌಶಲ್ಯ ಮಿಷನ್ ಅಧ್ಯಕ್ಷರಾದ ಟಿ.ಭೂಬಾಲನ್ ಅವರ ಅಧ್ಯಕ್ಷತೆಯಲ್ಲಿ ಸೋಮವಾರ ಜಿಲ್ಲಾಧಿಕಾರಗಳ ಸಭಾ ಭವನದಲ್ಲಿ ಜರುಗಿದ ಜಿಲ್ಲಾ ಕೌಶಲ್ಯ ಮಿಷನ್ ಸಮಿತಿ ಸಭೆಯಲ್ಲಿ, ಸದರಿ ಉದ್ಯೋಗ ಗಿಣಣಠಿ://ಞಚಿಟಿಟ-ಛಿಊಟಿಟಜಥಿಣ.ಞಚಿಣಾಚಿಟಞಚಿಡ. ಛಿಂಟ ಪೋರ್ಟಲ್‌ದಲ್ಲಿ ನೋಂದಣಿ ಮಾಡಿಸುವಂತೆ ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಹಾಗೂ ಉಪ ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಉಪ ನಿರ್ದೇಶಕರು, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ವಿಜಯಪುರ ಇವರಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯ ನಿರುದ್ಯೋಗಿಗಳು ರಾಜ್ಯಮಟ್ಟದ ಉದ್ಯೋಗ ಮೇಳದಲ್ಲಿ ಭಾಗವಹಿಸಿ ಉದ್ಯೋಗ ದೊರೆಯಲು ಅನುಕೂಲವಾಗುವಂತೆ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಗ್ರಾಮ ಪಂಚಾಯತ್, ನಗರ ಸ್ಥಳೀಯ ಸಂಸ್ಥೆಗಳ ಸ್ವಚ್ಛವಾಹಿನಿಯ ಮೂಲಕ ವ್ಯಾಪಕ ಪ್ರಚಾರ ಕೈಗೊಳ್ಳಬೇಕು. ಆಶಾ-ಅಂಗನವಾಡಿ ಕಾರ್ಯಕರ್ತೆಯರು, ಸಮುದಾಯ ಸಂಪನ್ಮೂಲ ವ್ಯಕ್ತಿಗಳ ಮೂಲಕ ಗ್ರಾಮಗಳಲ್ಲಿ ಉದ್ಯೋಗ ಮೇಳ ಕುರಿತು ವ್ಯಾಪಕ ಮಾಹಿತಿ ಒದಗಿಸಬೇಕು. ಉದ್ಯೋಗ ಮೇಳಕ್ಕೆ ಸಂಬಂಧಿಸಿದಂತೆ, ಜಿಂಗಲ್ ತಯಾರಿಸಿ, ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಪ್ರಚುರಪಡಿಸುವಂತೆ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾ-ರಿಗಳಿಗೆ ಸೂಚಿಸಿದರು.

ಡೇ-ನಲ್ಮ್ ಅಭಿಯಾನದ ಪಿ.ಎಂ. ಸ್ವ-ನಿಧಿ 1,2ಮತ್ತು 3ನೇ ಹಂತದಲ್ಲಿ ಬಾಕಿ ಇರುವ ಫಲಾನುಭವಿಗಳ ಅರ್ಜಿಗಳನ್ನು ಪಡೆದು, ಸಾಲ ಮಂಜೂರಾತಿ ಹಾಗೂ ಬಿಡುಗಡೆ ಮಾಡಲು, ಸ್ವ-ನಿಧಿ ಸೇ ಸಮೃದ್ಧಿ ಯೋಜನೆಯಡಿ 8 ಸಾಮಾಜಿಕ ಭದ್ರತಾ ಯೋಜನೆಯಡಿ ಫಲಾನುಭವಿಗಳಿಗೆ ಒದಗಿಸಲು ಕ್ರಮ ವಹಿಸುವಂತೆ ಭದ್ರತಾ ಯೋಜನೆಗಳನ್ನು ಅರ್ಹ ಸಂಬಂಧಿಸಿದ ಇಲಾಖೆಗಳಿಗೆ ಅವರು ಸೂಚಿಸಿದರು.

ಸ್ವ-ಸಹಾಯ ಸಂಘ ರಚನೆ, ಪ್ರದೇಶ ಮಟ್ಟದ ಒಕ್ಕೂಟ, ಸ್ವಯಂ-ಉದ್ಯೋಗ- ವೈಯಕ್ತಿಕ, ಗುಂಪು, ಬ್ಯಾಂಕ್ ಲಿಂಕೇಜ್ ನಲ್ಲಿ ಶೇ 100 ರಷ್ಟು ಪ್ರಗತಿ ಸಾಧಿಸಬೇಕು. ಸ್ವ-ನಿಧಿ ಸೇ ಸಮೃದ್ಧಿ ಹಾಗೂ ಸಮಾಜ ಕಲ್ಯಾಣ ಇಲಾಖೆಯಡಿಯ ವಿಶೇಷ ಕೇಂದ್ರೀಯ ನೇರವಿನಡಿ ಎಂಜ (ಖಅಂ ಣಾ ಖಅಖಕ) ಕಾರ್ಯಕ್ರಮದಡಿ ಮತ್ತು ಡೇ-ನಲ್ಮ್ ಅಭಿಯಾನದಲ್ಲಿ ಬಿಡುಗಡೆಯಾದ ಅನುದಾನ ಶೇ 100 ರಷ್ಟು ವೆಚ್ಚ ಮಾಡಲು ನಗರ ಸ್ಥಳೀಯ ಸಂಸ್ಥೆಗಳ ಆಯುಕ್ತರು ಹಾಗೂ ಮುಖ್ಯಾಧಿಕಾರಿಗಳಿಗೆ ಅವರು ಸೂಚಿಸಿದರು.

ಈ ಸಂದರ್ಭದಲ್ಲಿ ಉದ್ಯೋಗ ಮೇಳದ ಪೋಸ್ಟರ್ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಬಿಡುಗಡೆಗೊಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಾದೇವ ಮುರಗಿ,ಮಹಾನಗರ ಪಾಲಿಕೆ ಆಯುಕ್ತ ಬದ್ರುದ್ದಿನ ಸೌದಾಗರ್, ಜಿಲ್ಲಾ ಪಂಚಾಯತಿಯ ಉಪ ಕಾರ್ಯದರ್ಶಿ ವಿಜಯ ಅಜೂರ್, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ವಿಜಯಕುಮಾರ್ ಮೆಕ್ಕಳಕಿ,ಮಹಾನಗರ ಪಾಲಿಕೆ ಉಪ ಆಯುಕ್ತ ಮಹಾವೀರ ಬೋರಣ್ಣವರ, ಆಹಾರ ಇಲಾಖೆ ಉಪ ನಿರ್ದೇಶಕ ವಿನಯಕುಮಾರ ಪಾಟೀಲ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ಸಿ.ಬಿ.ಕುಂಬಾರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಈರಣ್ಣ ಆಶಾಪೂರ, ಸೇರಿದಂತೆ ವಿವಿಧ ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾ-ರಿಗಳು ಹಾಗೂ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಿಪಿಐ ಶರಣಗೌಡ ಗೌಡರರಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**




ಬಸವನಬಾಗೇವಾಡಿ: ವಿಜಯಪುರ ಹೆಸ್ಕಾಂ ಸಿಪಿಐಯಾಗಿ ಕಾರ್ಯ ನಿರ್ವಹಿಸುತ್ತಿದ್ದ ಶರಣಗೌಡ ಗೌಡರ ಅವರು ಸೋಮವಾರ ನಿಡಗುಂದಿ ಸಿಪಿಐ ಆಗಿ ವರ್ಗಾವಣೆಗೊಂಡು ನಿಡಗುಂದಿಗೆ ಅಧಿಕಾರ ಸ್ವೀಕರಿಸಲು ತೆರಳುವ ಮುನ್ನ ಬಸವನಬಾಗೇವಾಡಿಯ ಬಸವೇಶ್ವರರ ದೇವಸ್ಥಾನಕ್ಕೆ ಬೇಟಿ ನೀಡಿ ದರ್ಶನ ಪಡೆದ ಸಂದರ್ಭದಲ್ಲಿ ರಾಷ್ಟ್ರೀಯ ಬಸವಸೈನ್ಯದ ಸಂಸ್ಥಾಪಕ ಅಧ್ಯಕ್ಷ ಶಂಕರಗೌಡ ಬಿರಾದಾರ ಅವರು ಬಸವೇಶ್ವರರ ಭಾವಚಿತ್ರ ನೀಡಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಬಸವನಬಾಗೇವಾಡಿಯಲ್ಲಿ ಸುಮಾರು ಮೂರು ವರ್ಷ ಪಿಎಸ್‌ಐ ಆಗಿ ಕಾರ್ಯ ನಿರ್ವಹಿಸಿದ್ದು ನನಗೆ ಬಹಳಷ್ಟು ತೃಪ್ತಿ ಇದೆ. ಬಸವನಬಾಗೇವಾಡಿಯ ಹಿರಿಯರು, ಯುವಕರು ,ಎಲ್ಲ ಸಂಘ- ಸಂಸ್ಥೆಗಳು ನನಗೆ ಬಹಳ ಸಹಕಾರವನ್ನು ಕೊಟ್ಟಿದ್ದು ಎಂದಿಗೂ ನಾನು ಮರೆಯುವುದಿಲ್ಲ ಎಂದು ಹೇಳಿದರು. ಶಂಕರಗೌಡ ಬಿರಾದಾರ ಮಾತನಾಡಿ, ಶರಣಗೌಡ ಗೌಡರ ನಮ್ಮ ಬಸವನಬಾಗೇವಾಡಿ ಠಾಣೆಯಲ್ಲಿ ಇದ್ದಾಗ ಎಲ್ಲ ಸಮುದಾಯದ ಜನರ ಜೊತೆ ಉತ್ತಮ ಬಾಂಧವ್ಯ ಹೊಂದಿದ್ದರು. ಕಾನೂನು ಸುವ್ಯವಸ್ಥೆ ಕಾಪಾಡುವುದರೊಂದಿಗೆ ಪೊಲೀಸರು ಸಾರ್ವಜನಿಕರ ಮದ್ಯ ಒಳ್ಳೆಯ ಸಂಬಂಧವನ್ನು ಬೆಳೆಸಿದ್ದರು. ಇಂತಹ ಅಧಿಕಾರಿ ಮುಂಬರುವ ದಿನದಲ್ಲಿ ಡಿಎಸ್ಪಿ ಆಗಿ ಮುಂಬಡ್ತಿ ಹೊಂದಿ ಬಸವನಬಾಗೇವಾಡಿಗೆ ಬರಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುಖಂಡರಾದ ಜಟ್ಟಿಂಗರಾಯ ಮಾಲಗಾರ, ಸುರೇಶ ಪಡಶೆಟ್ಟಿ, ಪರಶುರಾಮ ತುಪ್ಪದ, ಸುಭಾಷ ಗುಂಡಾನವರ, ಅಣ್ಣಾಜಿ ಲಮಾಣಿ ಇತರರು ಇದ್ದರು.

### ಬಿಜೆಪಿ ಜಿಲ್ಲಾ ಕಾರ್ಯಕಾರಣಿ ಸಭೆಗೆ ಚಾಲನೆ ನೀಡಿದ ಮಾಜಿ ಎಂಎಲ್ಸಿ ಅರುಣ ಶಹಾಪೂರ ಆರೋಪ

# ಕಾಂಗ್ರೆಸ್ ಮುಸ್ಲಿಂರ ತುಷ್ಟೀಕರಣ ಪರಾಕಾಷ್ಠೆಗೆ!



**ಉದಯರಶ್ಮಿ ನ್ಯೂಸ್**

ವಿಜಯಪುರ: ಯಾವ ಅಸುರ ಶಕ್ತಿಗಳು ರಾಮ ಮಂದಿರ ನಿರ್ಮಾಣ ವಿರೋಧಿಸಿದವೋ, ಕರಸೇವಕರನ್ನು ದಮನಿಸಿದವೋ ಆ ಶಕ್ತಿಗಳೇ ಇಂದು ಜೈ ಶ್ರೀರಾಮ ಘೋಷಣೆ ಮೊಳಗಿಸುತ್ತಿದ್ದಾರೆ ಎಂದು ವಿಧಾನ ಪರಿಷತ್ ಮಾಜಿ ಸದಸ್ಯ ಅರುಣ ಶಹಾಪೂರ ಹೇಳಿದರು.

ವಿಜಯಪುರದ ಸಾಯಿ ವಿಹಾರದಲ್ಲಿ ನಡೆದ ಬಿಜೆಪಿ ಜಿಲ್ಲಾ ಕಾರ್ಯಕಾರಣಿ ಸಭೆಗೆ ಚಾಲನೆ ನೀಡಿ ಮಾತನಾಡಿದ ಅವರು, ಕರಸೇವಕರನ್ನು ಗುಂಡಿಕ್ಕಿದ್ದ ಶಕ್ತಿಗಳು ಸಹ ಇಂದು ರಾಮ ನಾಮವನ್ನು ಜಪಿಸುತ್ತಿವೆ, ಯಾವ ಮುಖ್ಯಮಂತ್ರಿ ತಿಲಕ ಹಚ್ಚಿಕೊಳ್ಳಲು ನಿರಾಕ-ರಿಸುತ್ತಿದ್ದರೋ ಅವರು ಸಹ ರಾಮನ ಸ್ಮರಿಸುತ್ತಿದ್ದಾರೆ, ಬನಾಯೇಂಗೆ ಮಂದಿರ ಎಂಬ ಹಾಡನ್ನು ಹಾಡಿದರೆ ಕೇಸು ದಾಖಲಿಸುವ ಪರಿಸ್ಥಿತಿ ಇತ್ತು, ಅಂದು ಆ ರೀತಿ ರಾಮ ಭಕ್ತರನ್ನು ಕಾಡಿದವರೇ ಇಂದು ರಾಮನನ್ನು ನೆನೆಯುತ್ತಿದ್ದಾರೆ ಎಂದರು.

ರಾಮ ಮಂದಿರ ನಿರ್ಮಾಣದ ಮೂಲಕ ಭಾರತ ವಿಶ್ವ ಗುರುವಾಗಿ ಶೀಘ್ರದಲ್ಲಿಯೇ ಅಲಂಕೃತವಾಗಲಿದೆ ಎಂದರು.

ಎಸ್.ಎಸ್.ಎಲ್.ಸಿ. ಪರೀಕ್ಷೆಯ ಸಮಯ ನಿಗದಿಯಲ್ಲೂ ಧರ್ಮದ ಲೇಪನ ಮಾಡಿರುವ ಕಾಂಗ್ರೆಸ್ ಮುಸ್ಲಿಂರ ತುಷ್ಟೀಕರಣ ಪರಾಕಾಷ್ಠೆಗೆ ತಲುಪಿದೆ, ಶುಕ್ರವಾರ ಪ್ರಾರ್ಥನೆಗಾಗಿ ಸಮಯ ಮೀಸಲಿರಿಸಿ ಪರೀಕ್ಷೆಯ ವೇಳಾಪಟ್ಟಿ ನಿಗದಿ ಮಾಡಲು ಧರ್ಮದ ಓಲೈಕೆಯಂತಹ ನೀಚಕೃತ್ಯಕ್ಕೆ ತಲುಪಿದೆ ಎಂದು ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು.

ಒಂದೇ ಒಂದು ಸಂಸದ ಸ್ಥಾನವನ್ನು ಕಾಂಗ್ರೆಸ್ ಜಯ ಸಾಧಿಸುವುದಿಲ್ಲ, ಎಲ್ಲ ಕ್ಷೇತ್ರದಲ್ಲಿಯೂ ಬಿಜೆಪಿ ಗೆಲುವಿನ ನಗೆ ಬೀರಲಿದೆ ಎಂದರು.

ಕಾಂಗ್ರೆಸ್ ಕಾಲಘಟ್ಟದಲ್ಲಿ ಅಡುಗೆ ಅನೀಲ ಪಡೆಯಲು ಶಿಫಾರಸ್ಸು ಬೇಕಾಗಿತ್ತು, ಈಗ ಕಾಲ ಬದಲಾಗಿದೆ,ಈ ಬಾರಿ ಕಳೆದ ದಾಖಲೆಯನ್ನು ಸಹ ಮುರಿದು ಹೆಚ್ಚಿನ ಕ್ಷೇತ್ರಗಳಲ್ಲಿ ಬಿಜೆಪಿ ಜಯ ಸಾಧಿಸಲಿದೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಆರ್.ಎಸ್. ಪಾಟೀಲ ಕುಚಬಾಳ ಮಾತನಾಡಿ, ಹಿಂದೂತ್ವ ಹಾಗೂ ಬಿಜೆಪಿಯನ್ನು ವಿರೋಧಿಸಿದವರೇ ಇಂದು ನಾವು ಹಿಂದೂ, ನಾವು ಹಿಂದೂ ಎಂದು ಹೇಳುವಂತಾಗಿದೆ, ಮತಗಳ ಓಲೈಕೆಗಾಗಿ ದೇಗುಲಗಳಿಗೆ ಹೋಗಲು ಸಹ ಅಂಜುತ್ತಿದ್ದವರು ಸಹ ಇಂದು ಗಂಟೆಗಟ್ಟಲೆ ದೇವಾಲಯದ ಮುಂದೆ ಸರತಿ ಸಾಲಿನಲ್ಲಿ ನಿಲ್ಲಬೇಕಾಗಿದೆ ಎಂದರು.

ವೋಟ್ ಬ್ಯಾಂಕ್ ಗಾಗಿ ಜಾತಿ, ಜಾತಿಗಳ ನಡುವೆ ವೈಷಮ್ಯ ಬಿತ್ತಿದ ಕಾಂಗ್ರೆಸ್ ಕಾಲಘಟ್ಟದಲ್ಲಿ ಯಾವ ಅಭಿವೃದ್ಧಿ ಕಾಮಗಾರಿಗಳು ನಡೆಯಲಿಲ್ಲ ಎಂದರು.

ಬಜೆಟ್ ಅಭಿಪ್ರಾಯ ಹೇಳುವಾಗ ದೇಶವನ್ನೇ ವಿಭಜನೆ ಮಾಡುವ ಹೇಳಿಕೆ ನೀಡುವಷ್ಟು ಹೇಯಕೃತ್ಯಕ್ಕೆ ತೊಡಗಿರುವ ಕಾಂಗ್ರೆಸ್ ನಾಯಕರಿಗೆ ಬೌದ್ಧಿಕ ದಿವಾಳಿಯಾಗಿದೆ ಎಂದು ಲೇವಡಿ ಮಾಡಿದರು.

ಒಂದು ಸಮುದಾಯದವರಿಗೆ ಓಲೈಕೆ ಮಾಡಲು ಪರೀಕ್ಷೆ ಸಮಯ ನಿಗದಿ ಮಾಡಲು ಹೊರಟಿರುವುದು ಎಷ್ಟು ಸರಿ? ಎಂದು ಪ್ರಶ್ನಿಸಿದರು.

ಈ ಹಿಂದೆ ಯುಪಿಎ ಸರ್ಕಾರ ಅವಧಿಯಲ್ಲಿ ಎಲ್ಲಿ ಬಾಂಬ್ ಬೀಳುತ್ತವೆ ಎಂಬ ಭಯ ಇರುತ್ತಿತ್ತು, ಆದರೆ ಈಗ ಯಾವ ಭಯವೂ ಇಲ್ಲದಂತಾಗಿದೆ ಎಂದರು.

ಕಾಂಗ್ರೆಸ್ ಶಾಸಕರೇ ಕಾಂಗ್ರೆಸ್ ಬಗ್ಗೆ ಬೇಸತ್ತಿದ್ದಾರೆ, ಗ್ಯಾರಂಟಿ ಹೊರೆಯಿಂದ ಯಾವ ಅಭಿವೃದ್ಧಿಗೂ ಅನುದಾನ ದೊರಕುತ್ತಿಲ್ಲ, ಹೀಗಾಗಿ ಯಾವ ರೀತಿ ಅಭಿವೃದ್ಧಿ ಮಾಡಬೇಕು ಎಂದು ಅವರ ಸ್ವ ಪಕ್ಷದ ಶಾಸಕರೇ ಆತಂಕ ಹೊರಹಾಕಿದ್ದಾರೆ, ಲೋಕಸಭೆ ಚುನಾವಣೆವರೆಗೆ ಅವರೆಲ್ಲರೂ ಕಾಯುತ್ತಿದ್ದಾರೆ ಎಂದರು.

ವಿಧಾನ ಪರಿಷತ್ ಸದಸ್ಯ ಪಿ.ಎಚ್. ಪೂಜಾರ, ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ, ಮಾಜಿ ಶಾಸಕರಾದ ರಮೇಶ ಭೂಸನೂರ, ಸೋಮನಗೌಡ ಪಾಟೀಲ ಸಾಸನೂರ, ಕರ್ನಾಟಕ ಸಾವಯವ ಬೀಜ ಪ್ರಮಾಣನ ಸಂಸ್ಥೆ ಅಧ್ಯಕ್ಷ ವಿಜುಗೌಡ ಪಾಟೀಲ, ಲಿಂಬೆ ಅಭಿವೃದ್ಧಿ ಮಂಡಳಿ ಮಾಜಿ ಅಧ್ಯಕ್ಷ ಚಂದ್ರಶೇಖರ ಕವಟಗಿ, ಮುಖಂಡರಾದ ಉಮೇಶ ಕಾರಜೋಳ, ಕಾಸುಗೌಡ ಬಿರಾದಾರ, ಸಂಜೀವ ಐಹೊಳಿ, ಮಲ್ಲಿಕಾರ್ಜುನ ಜೋಗೂರ, ಬಸವರಾಜ ಬಿರಾದಾರ, ಮಲ್ಲಮ್ಮ ಜೋಗೂರ ಪಾಲ್ಗೊಂಡಿದ್ದರು.

ಪಾಲಿಕೆ ಸದಸ್ಯ ಶಿವರುದ್ರ ಬಾಗಲಕೋಟ ಕಾರ್ಯಕ್ರಮ ನಿರೂಪಿಸಿದರು.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR